# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 70
Volume - 01 Issue - 70
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 15–09–2023 ಶುಕ್ರವಾರ
Date: 15-09-2023 Friday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



**ಒಳಪುಟದ ಸುದ್ದಿಗಳು**

ಗೌರಸಮುದ್ರ ಮಾರಮ್ಮ ದೇವಿ ಜಾತ್ರೆ: ಪ್ರಾಣಿ ಬಲಿ ನಡೆಸಿದರೆ ಕಠಿಣ ಕ್ರಮ: ಎಸ್ಪಿ 2

ಉತ್ತಮ ಆಟ ಪ್ರದರ್ಶಿಸಿ ರಾಷ್ಟ್ರಮಟ್ಟದ ಕ್ರೀಡಾಪಟುಗಳಾಗಿ ಚಳ್ಳಕೆರೆ ಕೀರ್ತಿ ಹೆಚ್ಚಿಸಿ 3

ಸೆ.16 ರಂದು ಹೊಸದುರ್ಗದಲ್ಲಿ ಹಂಸಲೇಖರಿಗೆ ಅಭಿನಂದನೆ 4



ಸುದ್ದಿ, ಜಾಹಿರಾತಿಗೆ
9686622252


## ಫಾಸ್ಟ್ ನ್ಯೂಸ್

### ಇಂದಿನಿಂದ ಶುರುವಾಗಲಿದೆ ಚೈತ್ರಾ ಕುಂದಾಪುರ ವಿಚಾರಣೆ

ಬಹುಕೋಟಿ ವಂಚನೆ ಪ್ರಕರಣದಲ್ಲಿ ಬಂಧನಕ್ಕೊಳಗಾದ ಚೈತ್ರಾ ಕುಂದಾಪುರ ಅವರ ವಿಚಾರಣೆ ಇಂದಿನಿಂದ ಆರಂಭವಾಗಲಿದೆ. ನಿನ್ನೆ ಬಂಧನಕ್ಕೊಳಗಾದ ಅವರನ್ನು ರಾತ್ರಿ ಮಹಿಳಾ ಸಾಂತ್ವನ ಕೇಂದ್ರದಲ್ಲಿ ಇರಿಸಲಾಗಿತ್ತು. ಸದ್ಯ 10 ದಿನಗಳ ಕಾಲ ಕಸ್ಟಡಿಗೆ ಪಡೆದಿರುವ ಸಿಸಿಬಿ ಪೊಲೀಸರು, ಸಿಸಿಬಿ ಕಚೇರಿಗೆ ಕರೆತಂದು ವಿಚಾರಣೆ ನಡೆಸಲಿದ್ದಾರೆ. ಸಿಸಿಬಿ ಎಸಿಪಿ ರೀನಾ ಸುವರ್ಣ ಅವರಿಂದ ವಿಚಾರಣೆ ನಡೆಯಲಿದೆ. ಬಳಿಕ ಹಣ ಪಡೆದ ಸ್ಥಳಗಳಲ್ಲಿ ಮಹಜರು ಮಾಡಲಿದ್ದಾರೆ. ಚೈತ್ರಾ ಕುಂದಾಪುರ ಉದ್ಯಮಿ ಗೋವಿಂದ ಬಾಬು ಪೂಜಾರಿ ಮಾದರಿಯಲ್ಲೆ ಹಲವರಿಗೆ ವಂಚನೆ ಮಾಡಿರುವ ಸಾಧ್ಯತೆ ಹಿನ್ನೆಲೆ ಎಲ್ಲಾ ಆಯಾಮದಲ್ಲಿಯೂ ಬಂಧಿತ ಮೋಹನ್ ಕುಮಾರ್ ಅಲಿಯಾಸ್ ಗಗನ್ ಕಡೂರು, ರಮೇಶ್, ಧನರಾಜ್, ಶ್ರೀಕಾಂತ್, ಪ್ರಜ್ವಲ್ ಅವರನ್ನು ವಿಚಾರಣೆ ನಡೆಸಲಾಗುತ್ತದೆ.



### ಚೈತ್ರಾ ಕುಂದಾಪುರ ಕೇಸ್‌ನ ವ್ಯವಹಾರಕ್ಕೂ ನಮಗೂ ಸಂಬಂಧವಿಲ್ಲ: ಬೊಮ್ಮಾಯಿ

ಮಂಗಳೂರು: ಹಿಂದೂ ಮುಖಂಡೆ ಚೈತ್ರಾ ಕುಂದಾಪುರ ಕೋಟಿ ಡೀಲ್ ಪ್ರಕರಣ ಸಂಬಂಧ ಮಾತನಾಡಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಚೈತ್ರಾ ಕುಂದಾಪುರ ಕೇಸ್ ನ ವ್ಯವಹಾರಕ್ಕೂ ನಮಗೂ ಸಂಬಂಧವಿಲ್ಲ. ಈ ಪ್ರಕರಣದಲ್ಲಿ ಸಮಗ್ರ ತನಿಖೆ ಆಗಬೇಕು, ಯಾರೇ ಇದ್ದರೂ ಉಗ್ರ ಶಿಕ್ಷೆ ಆಗಲಿ. ಸ್ವಾಮೀಜಿ ಅಲ್ಲ, ಯಾರೇ ಇದ್ದರೂ ಅವರ ಬಂಧನ ಆಗಬೇಕು. ಟಿಕೆಟ್ ಕೊಡಿಸುತ್ತೇವೆ ಅಂತ ಹಣ ಪಡೆದಿರೋದನ್ನ ನಾವು ಗಂಭೀರವಾಗಿ ಪರಿಗಣಿಸ್ತೇವೆ. ಬಿಜೆಪಿಗೆ ಇದರಲ್ಲಿ ಯಾವುದೇ ಸಂಬಂಧ ಇಲ್ಲ ಎನ್ನುವುದು ಸ್ಪಷ್ಟ. ಹೋರಾಟ ಹಲವರು ಮಾಡ್ತಾರೆ, ಹಾಗಂತ ಅದಕ್ಕೆಲ್ಲವಕ್ಕೂ ಪಕ್ಷಕ್ಕೆ ಸಂಬಂಧ ಇಲ್ಲ. ತನಿಖೆ ಆಗಲಿ, ದೊಡ್ಡ ದೊಡ್ಡ ಹೆಸರನ್ನು ಅಪರಾಧಿ ಸ್ಥಾನದಲ್ಲಿ ಇದ್ದವರು ಹೇಳುತ್ತಾರೆ. ಆದರೆ ತನಿಖೆ ಆಗಿ ಅದರ ಸತ್ಯ ಹೊರ ಬರಲಿ ಎಂದರು.

### ಹಿಂದೂ ಸಂಘಟನೆಗೂ ಚೈತ್ರಾ ಕೇಸ್‌ಗೂ ತಳಕು ಹಾಕುವುದು ಸರಿಯಲ್ಲ: ಸತೀಶ್ ಹಾರಕಿಹೊಳಿ

ವಂಚನೆ ಪ್ರಕರಣದಲ್ಲಿ ಚೈತ್ರಾ ಕುಂದಾಪುರ ಬಂಧನವಾಗಿದೆ. ಈ ಬಗ್ಗೆ ಬೆಂಗಳೂರಿನಲ್ಲಿ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಹಿಂದೂ ಸಂಘಟನೆಗೂ ಇದಕ್ಕೂ ತಳಕು ಹಾಕುವುದು ಸರಿಯಲ್ಲ. ಹಿಂದೂ ಪರ ಭಾಷಣ ಮಾಡಿರುವುದನ್ನು ನಾನೂ ನೋಡಿದ್ದೇನೆ. ಆದರೆ ಈ ವಿಚಾರವನ್ನು ಸಂಘಟನೆಗೆ ಸೇರಿಸುವುದು ಸರಿಯಲ್ಲ. ಇದೊಂದು ಪ್ರತ್ಯೇಕ ಪ್ರಕರಣ ಅಂತಲೇ ಪರಿಗಣಿಸಬೇಕಾಗುತ್ತದೆ ಎಂದರು.

### ಚೈತ್ರಾ ಕುಂದಾಪುರ ಬಂಧನ ಪ್ರಕರಣ: ಪರಮೇಶ್ವರ ಪ್ರತಿಕ್ರಿಯೆ

ಚೈತ್ರಾ ಕುಂದಾಪುರ ಅವರನ್ನು ಬಂಧಿಸಿದ ಬಗ್ಗೆ ಪ್ರತಿಕ್ರಿಯೆ ನೀಡಿದ ಗೃಹಸಚಿವ ಡಾ.ಜಿ.ಪರಮೇಶ್ವರ, ನನಗೆ ಬಂದ ಮಾಹಿತಿ ಪ್ರಕಾರ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಹಣ ಪಡೆದಿದ್ದಾರೆ. 3.5 ಕೋಟಿ ರೂಪಾಯಿ ಹಣ ಪಡೆದಿರುವ ಬಗ್ಗೆ ಕಂಪ್ಲೆಂಟ್ ಆಗಿದೆ. ಸಿಸಿಬಿ ಪೊಲೀಸರ ತನಿಖೆ ಬಳಿಕ ಉಳಿದ ವಿಚಾರ ಗೊತ್ತಾಗಲಿದೆ. ಕೇಸ್‌ನಲ್ಲಿ ಸ್ವಾಮೀಜಿ ಭಾಗಿಯಾಗಿದ್ದರೆ ಅವರ ಬಂಧನವೂ ಆಗುತ್ತದೆ. ಪೊಲೀಸರು ಸುಮೊಟೋ ಕೇಸ್ ದಾಖಲಿಸಿಲ್ಲ. ಕಂಪ್ಲೆಂಟ್ ಆಧಾರದ ಮೇಲೆ ಚೈತ್ರಾ ಕುಂದಾಪುರ ಬಂಧನ ಆಗಿದೆ. ಯಾರೇ ತಪ್ಪು ಮಾಡಿದರೂ ಕೂಡ ಕಾನೂನಿನಡಿ ಕ್ರಮ ಆಗಲಿದೆ. ಚೈತ್ರಾ ಕುಂದಾಪುರ ಹಿಂದೂ ಪರವಾಗಿ ಭಾಷಣ ಮಾಡಿದ್ದಾರೆ. ಈ ಪ್ರಕರಣ ಮಿಕ್ಸಪ್ ಮಾಡುವುದು ಬೇಡ ಎಂದರು.

# ವಿದ್ಯಾರ್ಥಿ ಜೀವನದ ಅವಿಭಾಜ್ಯ ಅಂಗ ಕ್ರೀಡೆ

## ಚಿತ್ರದುರ್ಗ ತಾಲ್ಲೂಕು ಮಟ್ಟದ ಕ್ರೀಡಾಕೂಟಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಚಾಲನೆ

» **ಚಿತ್ರದುರ್ಗ**

ಕ್ರೀಡೆಯು ವಿದ್ಯಾರ್ಥಿಗಳ ಜೀವನದಲ್ಲಿ ಒಂದು ಅವಿಭಾಜ್ಯ ಅಂಗವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯು ಕ್ರೀಡೆಯಲ್ಲಿ ಭಾಗವಹಿಸಬೇಕು ಎಂದು ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ನಾಗಭೂಷಣ್ ಹೇಳಿದರು.

ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಚಿತ್ರದುರ್ಗ ತಾಲ್ಲೂಕು ಮಟ್ಟದ 14 ಮತ್ತು 17 ವರ್ಷದ ವಯೋಮಿತಿಯ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಬಾಲಕ ಬಾಲಕಿಯರ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು. ಕ್ರೀಡೆಯಲ್ಲಿ ಉತ್ತಮವಾದಂತಹ ಸಾಧನೆ ಮಾಡಿ ಮುಂದೆ ಜಿಲ್ಲಾ, ರಾಜ್ಯ, ರಾಷ್ಟ್ರ ಮಟ್ಟಕ್ಕೆ ನಿಮ್ಮ ಪ್ರತಿಭೆಯನ್ನು ತೋರಿಸುವುದಕ್ಕೆ ಕ್ರೀಡಾಕೂಟ ಸಹಕಾರಿಯಾಗಲಿದೆ ಎಂದು ಹೇಳಿದರು.





ಕ್ಷೇತ್ರ ಸಮನ್ವಯಾಧಿಕಾರಿ ಇ. ಸಂಪತ್ ಕುಮಾರ್ ಮಾತನಾಡಿ, ಶಾಲೆಯಲ್ಲಿ ಉತ್ತಮವಾದಂತಹ ತರಬೇತಿ ಇರುತ್ತದೆಯೋ ಅಂತಹ ಮಕ್ಕಳು ಒಳ್ಳೆಯ ರೀತಿಯ ಕ್ರೀಡೆಗಳಲ್ಲಿ ಹೊರ ಹೊಮ್ಮಲು ಸಾಧ್ಯವಾಗುತ್ತದೆ.

ಗ್ರಾಮೀಣ ಭಾಗಗಳಲ್ಲಿ ಅತಿ ಉತ್ತಮವಾದ ಕ್ರೀಡಾಪುಟಗಳು ಇರುತ್ತಾರೆ. ಅವರನ್ನು ದೈಹಿಕ ಶಿಕ್ಷಣ ಶಿಕ್ಷಕರು ಗುರುತಿಸಿ ಸಮಾಜಕ್ಕೆ ಪರಿಚಯಿಸಿ ಜಿಲ್ಲಾ, ರಾಜ್ಯ, ರಾಷ್ಟ್ರ ಮಟ್ಟಕ್ಕೆ ಕೊಂಡ್ಯೋಯುವ ಶಕ್ತಿ ದೈಹಿಕ ಶಿಕ್ಷಣ ಶಿಕ್ಷಕರಿಗೆ ಇರುತ್ತದೆ ಎಂದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ ಮಾತನಾಡಿ, ನಾವು ಓದುವ ಸಂದರ್ಭದಲ್ಲಿ ಕ್ರೀಡೆಗೆ ಭಾಗವಹಿಸಲು ಸರಿಯಾದ ಸೌಲಭ್ಯಗಳು ಇರಲಿಲ್ಲ. ಪ್ರಸ್ತುತ ಎಲ್ಲಾ ತರಹದ ಸೌಲಭ್ಯಗಳು ಇವೆ. ಅವುಗಳನ್ನು ಕ್ರೀಡಾಪಟುಗಳು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದ ಅವರು, ಪ್ರತಿ ಶಾಲೆಯಲ್ಲಿ ದೈಹಿಕ ಶಿಕ್ಷಣ ಶಿಕ್ಷಕರು ಇರುವುದರಿಂದ ವಿದ್ಯಾರ್ಥಿಗಳು ಕ್ರೀಡಾಪಟುಗಳಾಗಿ ಹೊರ ಹೊಮ್ಮಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಶಿಕ್ಷಣಾಧಿಕಾರಿಗಳ ಸಂಘ, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘ, ಸಹ ಶಿಕ್ಷಕರ ಸಂಘ, ಪ್ರಾಥಮಿಕ ಶಾಲಾ ಬಡ್ತಿ ಮುಖ್ಯ ಶಿಕ್ಷಕರ ಸಂಘ, ಪ್ರಾಥಮಿಕ ಹಾಗೂ ಪ್ರೌಢಶಾಲಾ ದೈಹಿಕ ಶಿಕ್ಷಕರ ಸಂಘದ ಜಿಲ್ಲಾ ಹಾಗೂ ತಾಲ್ಲೂಕು ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ನಿರ್ದೇಶಕರು ಸೇರಿದಂತೆ ದೈಹಿಕ ಶಿಕ್ಷಕರು ಹಾಗೂ ಕ್ರೀಡಾಪಟುಗಳು ಇದ್ದರು.

# ಪರಿಸರಸ್ನೇಹಿ ಗಣಪತಿ ಪ್ರತಿಷ್ಠಾಪಿಸಲು ಹೊಳಲ್ಕೆರೆ ಪುರಸಭೆಯಿಂದ ಜಾಗೃತಿ ಜಾಥ

» **ಹೊಳಲ್ಕೆರೆ**

ಹೊಳಲ್ಕೆರೆ ಪುರಸಭೆ ಕಾರ್ಯಾಲಯ, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಹಾಗೂ ಜಿಲ್ಲಾಧಿಕಾರಿಗಳ ಸೂಚನೆಯಂತೆ ತಾಲ್ಲೂಕು ಆಡಳಿತ, ಪುರಸಭೆ, ಪೋಲೀಸ್ ಇಲಾಖೆ, ಹೊಳಲ್ಕೆರೆ ಸಾರ್ವಜನಿಕ ಶಿಕ್ಷಣ ಇಲಾಖೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಹಯೋಗದೊಂದಿಗೆ ಇಂದು ಹೊಳಲ್ಕೆರೆ ಪಟ್ಟಣದಲ್ಲಿ ಸಾರ್ವಜನಿಕ ಜಾಗೃತಿಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಹೊಳಲ್ಕೆರೆ ಪಟ್ಟಣದ ಸಾರ್ವಜನಿಕರು ಪರಿಸರ ಸ್ನೇಹಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡಿ ಸ್ವಚ್ಛ ಮತ್ತು ಸುಂದರ, ಶಾಂತಿಯುತವಾಗಿ ಹಬ್ಬವನ್ನು ಆಚರಿಸಲು ಹಾಗೂ ಸರ್ಕಾರದಿಂದ ಹಾಗೂ ಪುರಸಭೆಯಿಂದ ನೀಡಿರುವ ಸೂಚನೆಗಳನ್ನು ಪಾಲಿಸುವಂತೆ ಸೂಚಿಸಲಾಯಿತು.



**ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಲು ಪುರಸಭೆಯ ಸೂಚನೆಗಳು .**

1. ಪಿ.ಓ.ಪಿ ಗಣೇಶ ಮೂರ್ತಿಗಳ ತಯಾರಿಕೆ, ಮಾರಾಟ, ಪ್ರತಿಷ್ಠಾಪನೆಯನ್ನು ಸಂಪೂರ್ಣ ಸ್ಥಗಿತಗೊಳಿಸುವುದು
2. ಗಣಪತಿ ಮೂರ್ತಿ ಪ್ರತಿಷ್ಠಾಪನೆಗು ಮುನ್ನ ಪುರಸಭೆ, ಪೋಲೀಸ್ ಇಲಾಖೆ, ಬೆಸ್ಕಾಂ ಹಾಗೂ ಸಕ್ಷಮ ಪ್ರಾಧಿಕಾರಗಳಿಂದ ಅನುಮತಿಪಡೆಯುವುದು
3. ದಿನನಿತ್ಯ ಉತ್ಪತ್ತಿಯಾಗುವ ತ್ಯಾಜ್ಯವನ್ನು ಪುರಸಭೆ ವಾಹನಕ್ಕೆ ನೀಡಿ ಸ್ವಚ್ಚತೆಯನ್ನು ಕಾಪಾಡುವುದು
4. ಪ್ಲಾಸ್ಟಿಕ್ ಬಳಕೆಯನ್ನು ಮಾಡಬಾರದು
5. ಸಾರ್ವಜನಿಕ ಹಾಗೂ ವಾಹನ ಸಂಚಾರಕ್ಕೆ ಅಡೆತಡೆಯಾಗದಂತೆ ನೋಡಿಕೊಳ್ಳುವುದು
6. ಪುರಸಭೆಯಿಂದ ನಿಗದಿಪಡಿಸಿರುವ ಸ್ಥಳಗಳಲ್ಲಿ ಮಾತ್ರ ಗಣಪತಿ ವಿಸರ್ಜನೆ ಮಾಡುವುದು
7. ಮೇಲ್ಕಂಡ ಸೂಚನೆಗಳನ್ನು ಉಲ್ಲಂಘನೆ ಮಾಡಿದ್ದಲ್ಲಿ ದಂಡ ವಿಧಿಸುವುದಲ್ಲದೇ ಶಿಸ್ತು ಕ್ರಮ ಕೈಗೊಳ್ಳಲಾಗುವುದು

ತಾಲ್ಲೂಕು ಆಡಳಿತಾಧಿಕಾರಿಗಳಾದ ಬಿ.ಬಿ.ಫಾತಿಮಾ, ಮುಖ್ಯಾಧಿಕಾರಿಗಳಾದ ಎ.ವಾಸಿಂ, ಪೋಲಿಸ್ ಉಪ ನಿರೀಕ್ಷಕರು ಸುರೇಶ್, ಸಮಾಜ ಕಲ್ಯಾಣ ಇಲಾಖೆ ಕುಮಾರ್, ತಾಲ್ಲೂಕು ಕಛೇರಿ ಸಿಬ್ಬಂದಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಸಿಬ್ಬಂದಿಗಳು, ಮಂಜುನಾಥ ಸ್ವಾಮಿ ಪ್ರೌಢ ಶಾಲೆ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು, ಪುರಸಭೆ ಸಿಬ್ಬಂದಿಗಳಾದ ಶೌಕತ್, ಪ್ರಶಾಂತ್, ಪೌರಕಾರ್ಮಿಕರು, ಸಿಬ್ಬಂದಿಗ ವರ್ಗ ಹಾಜರಿದ್ದರು.

# ಕವಾಡಿಗರಹಟ್ಟಿ ಸಂತ್ರಸ್ತ ಕುಟುಂಬಕ್ಕೆ ನೌಕರಿಗೆ ದಸಸಂ ಒತ್ತಾಯ




» **ಚಿತ್ರದುರ್ಗ**

ಕವಾಡಿಗರಹಟ್ಟಿ ಪ್ರದೇಶದಲ್ಲಿ ಮೃತ ಕುಟುಂಬದ ಒಬ್ಬ ವ್ಯಕ್ತಿಗೆ ಸರ್ಕಾರಿ ನೌಕರಿ ನೀಡುವುದಾಗಿ ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪನವರ ಆದೇಶ ಮಾಡಿದ್ದಾರೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ (ದಾದಾಸಾಹೇಜ್, ಡಾ. ಎನ್.ಮೂರ್ತಿ ಬಣ) ಜಿಲ್ಲಾಧ್ಯಕ್ಷರಾದ ಸಿ ಹೆಚ್ ಮಂಜುನಾಥ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಕವಾಡಿಗರಪಟ್ಟಿ ಸಂತ್ರಸ್ತರ ಪರವಾಗಿ ರಾಜ್ಯಾಧ್ಯಕ್ಷರಾದ ಡಾ. ಎನ್.ಮೂರ್ತಿರವರ ನೇತೃತ್ವದಲ್ಲಿ ಪ್ರತಿಭಟನೆ ಮೂಲಕ ಸರ್ಕಾರಕ್ಕೆ ಮತ್ತು ಜಿಲ್ಲಾಡಳಿತಕ್ಕೆ ಒತ್ತಾಯಿಸಿ ಹೋರಾಟ ನಡೆಸಿದ್ದು, ಹಾಗೂ ಸೆ. 01 ರಂದು ಸಂಘಟನೆಯಿಂದ 4 ದಿನಗಳ ಕಾಲ ಸರದಿ ಉಪವಾಸ ಸತ್ಯಾಗ್ರಹವನ್ನು ಸಹ ಮಾಡಿದ್ದು, ಹಾಗೂ ಸೆ. 11 ರಂದು ದ.ಸಂ.ಸ. ರಾಜ್ಯಾಧ್ಯಕ್ಷರು ಹಾಗೂ ನೂರಾರು ಸದಸ್ಯರು ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪನವರ ನಿವಾಸಕ್ಕೆ ನಿಯೋಗ ಹೋಗಿ ಮನವಿ ಸಲ್ಲಿಸಿದ್ದು, ಮನವಿಗೆ ಸ್ಪಂಧಿಸಿದ ಸಚಿವರು ಕವಾಡಿಗರಹಟ್ಟಿಯ ಪ್ರಕರಣದಲ್ಲಿ ಮರಣ ಹೊಂದಿದ 6 ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡುವುದಾಗಿ ಆದೇಶ ಮಾಡಿರುತ್ತಾರೆ ಎಂದು ತಿಳಿಸಿದರು.


ಪುಟ 2


## ಪ್ರಮುಖ ಸುದ್ದಿ

# ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ

» **ಚಿತ್ರದುರ್ಗ**

ಸೊಸೈಟಿಗಳಲ್ಲಿ ಹಾಲಿ ನೀಡುತ್ತಿರುವ ಅನ್ನಭಾಗ್ಯ ಯೋಜನೆಯಲ್ಲಿ ವಿತರಣೆ ಮಾಡುತ್ತಿರುವ ಅಕ್ಕಿಯು ಕಳಪೆಯಿಂದ ಕೂಡಿದ್ದು, ಬಡವರು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದು, ಪರಿಶೀಲನೆ ಮಾಡಿ ಗುಣಮಟ್ಟದ ಅಕ್ಕಿಯನ್ನು ನೀಡುವುದು. ಚಿತ್ರದುರ್ಗ ನಗರಸಭೆಗೆ ಆಡಳಿತಾಧಿಕಾರಿಯನ್ನು ನೇಮಕ ಮಾಡಿ ಹಲವಾರು ತಿಂಗಳು ಜನಪ್ರತಿನಿಧಿಗಳಿಗೆ ಯಾವುದೇ ಒಂದು ಜನರ ಸಮಸ್ಯೆಗೆ ಸ್ಪಂಧಿಸುವ ಅವಕಾಶವಿಲ್ಲದಂತಾಗಿದ್ದು, ಅದ್ದರಿಂದ ಕೂಡಲೇ ಅಧ್ಯಕ್ಷರು, ಉಪಾಧ್ಯಕ್ಷರನ್ನು ಆಯ್ಕೆ ಮಾಡಿ, ಜನಪ್ರತಿನಿಧಿಗಳ ಆಡಳಿತವನ್ನು ಜಾರಿ ಮಾಡಿ, ಅಡಳಿತಾಧಿಕಾರಿಯನ್ನು ರದ್ದುಪಡಿಸಲು ಸೇರಿದಂತೆ ವಿವಿಧ ಬೇಡಿಕೆಯನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕಕೊಳಗೇರಿನಿವಾಸಿಗಳಸಂಯುಕ್ತ ಸಂಘಟನೆವತಿಯಿಂದ ಜಿಲ್ಲಾ ಸಮಿತಿ, ತಾಲ್ಲೂಕು ಸಮಿತಿ ಪದಾಧಿಕಾರಿಗಳು ಜಿಲ್ಲಾಡಳಿತಕ್ಕೆ ಮತ್ತು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದಾರೆ.




ನಗರದ ಪ್ರವಾಸಿ ಮಂದಿರದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಸಾಮಾನ್ಯ ಬಡ ರೋಗಿಗಳು ಚಿಕಿತ್ಸೆಗೆಂದು ಹೋದರೆ ಸ್ವಲ್ಪ ಹೆಚ್ಚಿನ ಪ್ರಮಾಣದಲ್ಲಿ ರೋಗ ಕಂಡುಬಂದರೆ ಕೂಡಲೇ ಬಸವೇಶ್ವರ ಆಸ್ಪತ್ರೆ ಅಥವಾ ದಾವಣಗೆರೆಯ ಎಸ್. ಎಸ್. ಆಸ್ಪತ್ರೆಗೆ ಕಳುಹಿಸುವುದು ಒಂದು ವಾಡಿಕೆಯಾಗಿದೆ, ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಎಲ್ಲಾ ಸೌಲಭ್ಯವಿದ್ದರೂ ಸಹ, ವೈದ್ಯರು ಸರಿಯಾದ ಸೌಲಭ್ಯಗಳು ನಮ್ಮಲ್ಲಿ ಲಭ್ಯವಿಲ್ಲ ಎಂದು ಸಬೂಬು ಹೇಳಿ ಆರಿಕೆಯ ಉತ್ತರ: ನೀಡುತ್ತಿದ್ದಾರೆ ಎಂದು ದೂರಿದರು.

ಚಿತ್ರದುರ್ಗ ಸೇರಿದಂತೆ ಎಲ್ಲಾ ತಲ್ಲೂಕುಗಳ ಗ್ರಾಮ ಪಂಚಾಯಿತಿಗಳಿಂದ ಹಿಡಿದು ನಗರಸಭೆಗಳಲ್ಲಿ ಬಡವರು, ಮಧ್ಯಮ ವರ್ಗದವರು ಇ–ಸೋತ್ತು, ಕಂದಾಯ ವಗ್ಯೆರೆಗಳನ್ನು ಕಟ್ಟಲು ಹಾಗೂ ಇತರೆ ಕೆಲಸಗಳನ್ನು ಮಾಡಿಸಿಕೊಂಡು ಬರಲು ಹೋದರೆ ಇಂತಿಷ್ಟು ಹಣ ಲಂಚ ಎಂದು ಹೇಳಿ ವಸೂಲಿ ಮಾಡುವುದು ಮಾಮೂಲಿಯಾಗಿದೆ.ಮದಕರಿಪುರ ಗ್ರಾಪಂ, ಗೋನೂರು ಗ್ರಾಪಂ, ಮಠದಕುರುಬರಹಟ್ಟಿ, ಚೋಳಗಟ್ಟ ಗ್ರಾಮ ಪಂಚಾಯಿತಿ ಹಾಗೂ ನಗರಸಭೆಯಲ್ಲಿ ಕೂಡಲೇ ತುರ್ತಾಗಿ ಸಾರ್ವಜನಿಕರನ್ನು ಅಲೆದಾಡಿಸದಂತೆ ಅರ್ಜಿಗಳನ್ನು ನೀಡಿದೆ. ಒಂದು ವಾರದೊಳಗಾಗಿ ಅರ್ಜಿ ನೀಡಿದ ಫಲಾನುಭವಿಗಳಿಗೆ ಕೂಡಲೇ ಲಿಖಿತವಾಗಿ ಉತ್ತರ ನೀಡುವುದು ಹಾಗೂ ಆರ್ಜಿಗಳನ್ನು ವಿಲೇವಾರಿ ಮಾಡುವುದು, ಹಾಗೂ ಕೂಡಲೇ ಕೆಲಸ ಮಾಡಿ, ಸರ್ಕಾರಕ್ಕೆ ಬರುವ ಆದಾಯ ಪಾವತಿಸಿಕೊಂಡು ಕೂಡಲೇ ನೀಡಲು, ಆದೇಶಿಸಿಸುವುದು, ಹಾಗೂ 1–2 ತಿಂಗಳು ಅರ್ಜಿಗಳನ್ನು ಉಳಿಸಿಕೊಂಡ ಪಿಡಿಓ ನಗರಸಭೆ ಅಧಿಕಾರಿಗಳ ಮೇಲೆ ಕೂಡಲೇ ಶಿಸ್ತಿನ ಕ್ರಮ ತೆಗೆದುಕೊಳ್ಳುವಂತೆ ಆಗ್ರಹಿಸಲಾಯಿತು.


ಪುಟ 2





## ಫಾಸ್ಟ್ ನ್ಯೂಸ್

### ಮೈತ್ರಿ ಬಗ್ಗೆ ಮಂಗಳೂರಿನಲ್ಲಿ ಬೊಮ್ಮಾಯಿ ಹೇಳಿದ್ದೇನು?

ಮಂಗಳೂರು: ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿ ವಿಚಾರವಾಗಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮೈತ್ರಿಯಲ್ಲಿ ಕ್ಷೇತ್ರ ಹಂಚಿಕೆ ಅಂತಿಮ ಹಂತ ತಲುಪಿಲ್ಲ. ಪ್ರಾಥಮಿಕ ಹಂತದಲ್ಲಿದೆ, ಬರುವ ದಿನಗಳಲ್ಲಿ ವರಿಷ್ಠರು ಚರ್ಚಿಸ್ತಾರೆ. ಮೈತ್ರಿ ಸಮಯದಲ್ಲಿ ನಮ್ಮ ಜತೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ತಾರೆ. ವಿರೋಧ ಪಕ್ಷಗಳಾಗಿ ಒಂದಾಗಿ ಹೆಚ್ಚು ಸೀಟ್ ಗೆಲ್ಲುವ ಉದ್ದೇಶವಾಗಿದೆ. ಈವರೆಗೆ ನಮ್ಮ ಅಭಿಪ್ರಾಯ ಪಡೆಯುವ ಹಂತಕ್ಕೆ ಬಂದಿಲ್ಲ ಎಂದರು.

### ಮುನಿಯಮ್ಮ ನಿವಾಸಕ್ಕೆ ಬಿಜೆಪಿ ನಿಯೋಗ ಭೇಟಿ

ಮಾಜಿ ಡಿಸಿಎಂ ಗೋವಿಂದ ಕಾರಜೋಳ ನೇತೃತ್ವದ ಬಿಜೆಪಿ ನಿಯೋಗ ಮುನಿಯಮ್ಮ ನಿವಾಸಕ್ಕೆ ಭೇಟಿ ನೀಡಿದೆ. ವಿಧಾನ ಪರಿಷತ್ ಸದಸ್ಯರಾದ ಎನ್. ರವಿಕುಮಾರ್ ಹಾಗೂ ಛಲವಾದಿ ನಾರಾಯಣಸ್ವಾಮಿ ಇದ್ದಾರೆ. ಯೋಜನೆ ಮತ್ತು ಸಾಂ ಖ್ಯಿಕ ಸಚಿವ ಡಿ.ಸುಧಾಕರ್ ಅವರು ವಂಚನೆ ಎಸಗಿದ ಆರೋಪ ಸಂಬಂಧ ವಂಚನೆಗೊಳಗಾದ ಮುನಿಯಮ್ಮ ಕುಟುಂಬಸ್ಥರು ದೂರು ನೀಡಿದ್ದರು.

### ಮೈಸೂರು ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಿಂದ ಹೈಅಲರ್ಟ್

ನೆರೆ ರಾಜ್ಯ ಕೇರಳದಲ್ಲಿ ನಿಫಾ ವೈರಸ್ ಪ್ರಕರಣ ಹೆಚ್ಚಾದ ಹಿನ್ನೆಲೆ ಮೈಸೂರು ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಿಂದ ಹೈಅಲರ್ಟ್ ಘೋಷಿಸಿದೆ. ರಾಜ್ಯಕ್ಕೆ ಪ್ರವೇಶಿಸುವ ಪ್ರಯಾಣಿಕರ ಮೇಲೆ ಪೊಲೀಸರು ನಿಗಾ ಇರಿಸಿದ್ದು, ಹೆಚ್.ಡಿ.ಕೋಟೆ ತಾಲೂಕಿನ ಬಾವಲಿ ಚೆಕ್‌ಪೋಸ್ಟ್‌ನಲ್ಲಿ ಗಡಿ ಪ್ರವೇಶಿಸುವ ವಾಹನಗಳ ತಪಾಸಣೆ ನಡೆಸಲಾಗುತ್ತಿದೆ. ಪ್ರತಿ ವಾಹನದ ವಿವರ ಪಡೆದುಕೊಂಡು ಪ್ರಯಾಣಿಕರ ಮೇಲೆ ನಿಗಾ ಇರಿಸಲಾಗುತ್ತಿದೆ. ಅಲ್ಲದೆ, ನಿಫಾ ಬಗ್ಗೆ ಸಿಬ್ಬಂದಿ ಜಾಗೃತಿ ಮೂಡಿಸುತ್ತಿದ್ದಾರೆ.

### ಕ್ಷೇತ್ರದಿಂದ ಕ್ಷೇತ್ರಕ್ಕೆ ವಿಸ್ತರಿಸುತ್ತಿರುವ ಆಪರೇಷನ್ ಹಸ್ತ

ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ಕಾಂಗ್ರೆಸ್,ಆಪರೇಷನ್ ಹಸ್ತವನ್ನು ಕ್ಷೇತ್ರದಿಂದ ಕ್ಷೇತ್ರಕ್ಕೆ ವಿಸ್ತರಿಸುತ್ತಿದೆ. ಬಿಜೆಪಿ ಶಾಸಕರ ಕ್ಷೇತ್ರದಲ್ಲಿ ನಾಯಕರ ಸೆಳೆಯುವ ಪ್ರಯತ್ನ ಮುಂದುವರಿಸಲಾಗಿದ್ದು, ಪದ್ಮನಾಭ ನಗರ ಕ್ಷೇತ್ರದ ಬಳಿಕ ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲೂ ಆಪರೇಷನ್‌ಗೆ ಕೈಹಾಕಲಾಗಿದೆ. ಮಾಜಿ ಕಾರ್ಪೋರೇಟರ್‌ಗಳನ್ನು ಸೆಳೆಯಲು 10 ಮಂದಿ ಆಪ್ತರ ತಂಡವನ್ನೇ ಡಿಕೆ ಶಿವಕುಮಾರ್ ಅವರು ಸಿದ್ಧಪಡಿಸಿದ್ದಾರೆ. ಈ ತಂಡ ಬಿಜೆಪಿ ನಾಯಕರೊಂದಿಗೆ ಸಂಪರ್ಕ ನಡೆಸುತ್ತಿದ್ದು, ಬಿಜೆಪಿ ಮಾಜಿ ಕಾರ್ಪರೇಟರ್‌ಗಳು ಕಾಂಗ್ರೆಸ್ ಸೇರಲು ಒಲವು ಹೊಂದಿದ್ದಾರೆ ಎಂದು ತಿಳಿದುಬಂದಿದೆ.

### ವಿವಿಧ ಬೇಡಿಕೆ ಈಡೇರಿಕೆ ಆಗ್ರಹಿಸಿ ಕುಂದಗೋಳ ಬಂದ್‌ಗೆ ಕರೆ

ವಿವಿಧ ಬೇಡಿಕೆಗಳ ಈಡೇರಿಕೆ ಆಗ್ರಹಿಸಿ ರೈತ ಸಂಘಟನೆಗಳು ಇಂದು ಕುಂದಗೋಳ ಬಂದ್‌ಗೆ ಕರೆ ನೀಡಿದೆ. ಅದರಂತೆ, ಕುಂದಗೋಳ ಪಟ್ಟಣದಲ್ಲಿ ಪ್ರತಿಭಟನಾ ರ್‍ಯಾಲಿ ಹಮ್ಮಿಕೊಂಡ ರೈತರು, ಗಾಳಿ ಮಾರಮ್ಮ ದೇವಸ್ಥಾನದಿಂದ ತಹಶೀಲ್ದಾರ್ ಕಚೇರಿವರೆಗೂ ರ್‍ಯಾಲಿ ನಡೆಸಲಿದ್ದಾರೆ. ವಿವಿಧ ಬೇಡಿಕೆಗಳಲ್ಲಿ ಅನಾವೃಷ್ಟಿಯಿಂದ ಕಂಗೆಟ್ಟ ರೈತರಿಗೆ 50 ಸಾವಿರ ಪರಿಹಾರ ನೀಡುವುದು ಸೇರಿದೆ.

### ನಗರಂಗೆರೆ ಸಾರ್ವಜನಿಕ ರಸ್ತೆಯಲ್ಲಿ ಇಸ್ಪೀಟ್ ಜೂಜಾಟ: ಹಣ ವಶ.

ಚಳ್ಳಕೆರೆ: ನಗರದ ಬೆಂಗಳೂರು ರಸ್ತೆಯ ನಗರಂಗೆರೆ ಕ್ರಾಸ್‌ನ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಸಾರ್ವಜನಿಕವಾಗಿ ಇಸ್ಪೀಟ್ ಜೂಜಾಟದಲ್ಲಿ ತೊಡಗಿದ್ದ ಸುಮಾರು ಐದಕ್ಕೂ ಹೆಚ್ಚು ಜನರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 8050ರೂಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿದ ಜೆ.ಶಿವರಾಜ್, ಖಚಿತ ವರ್ತಮಾನದ ಮೇರೆಗೆ ಪೇದೆ ವಿಶಾಲ್‌ರವರು ನೀಡಿದ ದೂರನ್ನು ಸ್ವೀಕರಿಸಿ ಮೇಲ್ಕಂಡಸ್ಥಳದಲ್ಲಿ ಜೂಜಾಟದಲ್ಲಿ ತೊಡಗಿದ್ದ ಶಫೀವುಲ್ಲಾ, ಯೋಗೇಶ್, ಮಾರನಾಯಕ, ಶ್ರೀನಿವಾಸ್, ಇಮ್ತಿಯಾಜ್ ಇವರ ಬಳಿಇದ್ದ ಜೂಜಾಟದ ಹಣ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ.

**ಅಕ್ರಮ ಮರಳು ಸಾಗಾಣಿಕೆ** : ಚಳ್ಳಕೆರೆ ಠಾಣಾ ವ್ಯಾಪ್ತಿಯ ಗೊರ್ಲಕಟ್ಟೆ ಗ್ರಾಮದ ಕೆರೆ ಸಮೀಪ ಗಣಿ ಮತ್ತು ಭೂಗರ್ಭ ಇಲಾಖೆ ಅನುಮತಿ ಇಲ್ಲದೆ ಟ್ರ್ಯಾಕ್ಟರ್‌ನಲ್ಲಿ ಹೆಚ್ಚಿನ ಲಾಭಗಳಿಸುವ ಉದ್ದೇಶದಿಂದ ಅಕ್ರಮವಾಗಿ ಮರಳು ತುಂಬಿಸಿಕೊಳ್ಳುತ್ತಿದ್ದು, ಸಾರ್ವಜನಿಕರ ಮಾಹಿತಿ ಮೇರೆಗೆ ಪಿಎಸ್‌ಐ ಕೆ.ಸತೀಶ್‌ನಾಯ್ಕ ಟ್ರ್ಯಾಕ್ಟರ್ ಸಹಿತ ಮಾಲೀಕ ಮಲ್ಲೇಶನನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಿದ್ದಾರೆ.

---

### ಗೌರಸಮುದ್ರ ಮಾರಮ್ಮ ದೇವಿ ಜಾತ್ರೆ: ಪೂರ್ವಸಿದ್ಧತೆಗಳ ಪರಿಶೀಲಿಸಿದ ಧರ್ಮೇಂದ್ರಕುಮಾರ್

# ಪ್ರಾಣಿ ಬಲಿ ನಡೆಸಿದರೆ ಕಠಿಣ ಕ್ರಮ: ಎಸ್ಪಿ

» **ಚಳ್ಳಕೆರೆ**

ಜಿಲ್ಲೆಯ ಪ್ರಸಿದ್ಧ ಜಾತ್ರೆಗಳಲ್ಲಿ ಒಂದಾದ ಗೌರಸಮುದ್ರ ಶ್ರೀಮಾರಮ್ಮ ದೇವಿ ಜಾತ್ರೆಗೆ ಸಕಲ ಸಿದ್ಧತೆಗಳು ನಡೆಯುತ್ತಿದ್ದು, ಜಾತ್ರೆಗೆ ಆಗಮಿಸುವ ಭಕ್ತಾಧಿಗಳ ರಕ್ಷಣೆ, ಬಂದೋಬಸ್ತ್ ಹಾಗೂ ವಾಹನ ಸಂಚಾರ ಸಿದ್ಧತೆಗಳನ್ನು ಪರಿಶೀಲಿಸಲು ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ ಆಗಮಿಸಿ ಅಧಿಕಾರಿಗಳು ಹಾಗೂ ಚುನಾಯಿತ ಜನಪ್ರತಿನಿಧಿಗಳಿಗೆ ಕೆಲವೊಂದು ಸೂಚನೆ ನೀಡಿದರು.

ದೇವಸ್ಥಾನಕ್ಕೆ ಭೇಟಿ ನೀಡಿ ದೇವಿಯ ದರ್ಶನ ಪಡೆದ ನಂತರ ತುಮಲು ಪ್ರದೇಶಕ್ಕೆ ತೆರಳಿದ ಅವರು, ಸುತ್ತಮುತ್ತಲ ಸಂಪರ್ಕ ರಸ್ತೆಯನ್ನು ಪರಿಶೀಲಿಸಿದರು. ಯಾವುದೇ ಕಾರಣಕ್ಕೂ ಭಕ್ತರು ಪ್ರಾಣಿ ಬಲಿಯನ್ನು ನೀಡಬಾರದು. ಸರ್ಕಾರ ಪ್ರಾಣಿಬಲಿಯನ್ನು ಕಡ್ಡಾಯವಾಗಿನಿಷೇದಿಸಿದ್ದು ಯಾರಾದರೂ ಪ್ರಾಣಿ ಬಲಿ ನೀಡಿದರೆ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ



ಚಳ್ಳಕೆರೆ ತಾಲ್ಲೂಕಿನ ಗೌರಸಮುದ್ರ ಶ್ರೀಮಾರಮ್ಮ ದೇವಿ ಜಾತ್ರೆಗೆ ಪೂರ್ವಸಿದ್ಧತೆಯನ್ನು ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ ವೀಕ್ಷಿಸಿದರು.

ಜರುಗಿಸಲಾಗುವುದು. ಯಾವ ರಸ್ತೆಯಲ್ಲಿ ಜನಸಂದಣಿ ಹೆಚ್ಚಾಗಿರುತ್ತದೆ ಎಂಬ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಜಾತ್ರೆ ಸಂದರ್ಭದಲ್ಲಿ ನೂಕುನುಗ್ಗಲನ್ನು ನಿಯಂತ್ರಿಸಲು ದೇವಸ್ಥಾನದ ಒಳ, ಹೊರಭಾಗವಲ್ಲದೆ ಸಾಧ್ಯವಾದರೆ ರಸ್ತೆಯ ಇಕ್ಕಲಗಳಲ್ಲಿ ಬ್ಯಾರಿಕೇಡ್ ನಿರ್ಮಿಸುವಂತೆ ಸೂಚನೆ ನೀಡಿದರು.

ಉಪವಿಭಾಗದ ಡಿವೈಎಸ್ಪಿ ರಾಜಣ್ಣ, ಕಳೆದ ಬಾರಿ ಜಾತ್ರೆ ಹಿನ್ನೆಲೆಯಲ್ಲಿ ಕೈಗೊಂಡ ಮುಂಜಾಗ್ರತ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಜಾತ್ರೆ ನಡೆಯುವ ಸೆ.19ರಂದು ಬೆಳಗ್ಗೆಯಿಂದ ಸಂಜೆವರೆಗೂ ಭಕ್ತರ ಹಾಗೂ ವಾಹನ ಸಂಚಾರ ದಟ್ಟವಾಗಿರುತ್ತದೆ ಎಂದರು.

ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ಮಾಹಿತಿ ನೀಡಿ, ಕಳೆದ ಕೆಲವು ವರ್ಷಗಳಿಂದ ಇಲ್ಲಿ ಕಾರ್ಯನಿರ್ವಹಿಸಿದ್ದು, ಜಾತ್ರೆಯನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗಲು ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಸಂಚಾರ ನಿಯಂತ್ರಣ, ವಾಹನ ನಿಲುಗಡೆ, ಬ್ಯಾರಿಕೇಡ್ ವ್ಯವಸ್ಥೆ, ಜನಜಂಗುಳಿ ನಿಯಂತ್ರಣಕ್ಕೆ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಕಳ್ಳರು ಮತ್ತು ಸಾಮಾಜಘಾತುಕ ಶಕ್ತಿಗಳ ನಿಯಂತ್ರಣಕ್ಕೆ ವಿಶೇಷ ಪೊಲೀಸ್ ಪಡೆಯನ್ನು ನೇಮಿಸಲಾಗುವುದು ಎಂದರು. ಭಕ್ತರ ನಿಯಂತ್ರಣ ಹಾಗೂ ಇನ್ನಿತರೆ ಚಟುವಟಿಕೆಗಳನ್ನು ನಿಯಂತ್ರಿಸಲು ಸಿಸಿ ಕ್ಯಾಮರದೊಂದಿಗೆ ವಾಚಿಂಗ್ ಟವರ್ ನಿರ್ಮಿಸಲಾಗುವುದು ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ ಮಾತನಾಡಿ, ಪ್ರತಿಬಾರಿಯೂ ಜಾತ್ರೆ ನಡೆದಾಗ ಭಕ್ತ ರಕ್ಷಣೆಯೂ ಸೇರಿದಂತೆ ಹಲವಾರು ವಿಷಯಗಳ ಬಗ್ಗೆ ಪೊಲೀಸ್ ಇಲಾಖೆ ಸಕ್ರಿಯವಾಗಿ ಕಾರ್ಯನಿರ್ವಹಿಸಿದೆ. ಕೆಲವೊಂದು ಘಟನೆಗಳನ್ನು ನಿಯಂತ್ರಿಸಲು ಚುನಾಯಿತ ಜನಪ್ರತಿನಿಧಿಗಳು ಸಹ ಪೊಲೀಸರಿಗೆ ಸಹಕಾರ ನೀಡುತ್ತಾ ಬಂದಿದ್ದಾರೆ. ಎಲ್ಲರ ಸಹಕಾರದಿಂದ ಈ ಬಾರಿಯ ಜಾತ್ರೆ ಯಶಸ್ವಿಯಾಗುವುದು ಎಂಬ ಭಾವನೆ ನಮಗಿದೆ ಎಂದರು.

ಸದಸ್ಯರಾದ ಶಶಿಕುಮಾರ್, ಮಲ್ಲಯ್ಯ, ತಿಮ್ಮಾರೆಡ್ಡಿ, ಸಂಜಯ್‌ಗೌಡ, ಗುರುಸ್ವಾಮಿ, ಜಯಮ್ಮ, ತುಳಸಿ, ಸುಭಾಷಿಣಿ, ಅರ್ಚಕ ಪಿ.ಆರ್.ನಿಂಗಣ್ಣ, ರುದ್ರಣ್ಣ, ಪಿಡಿಒ ಹನುಮಂತರಾಜು, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮ ಲೆಕ್ಕಾಧಿಕಾರಿ ನರೇಂದ್ರಬಾಬು ಉಪಸ್ಥಿತರಿದ್ದರು.

---

# ಪ್ರತಿಭಾಕಾರಂಜಿ ಮೂಲಕ ವಿದ್ಯಾರ್ಥಿಗಳ ಬುದ್ದಿ ಕೌಶಲ್ಯತೆ ಹೆಚ್ಚಿಸಲು ಇಲಾಖೆ ಯತ್ನ

» **ಚಳ್ಳಕೆರೆ**

ಇತ್ತೀಚೆಗೆ ನಡೆದ ತಳಕು ಕ್ಲಸ್ಟರ್ ವಿಭಾಗದ ಕ್ರೀಡೆಯಲ್ಲಿ ಉತ್ತಮ ಫಲಿತಾಂಶ ಪಡೆದಿದ್ದೀರ, ಅದೇ ರೀತಿ ಇಂದು ಹಮ್ಮಿಕೊಂಡ ಪ್ರೌಢಶಾಲಾ ವಿಭಾಗದ ಕ್ಲಸ್ಟರ್ ಮಟ್ಟದ ಕಲೋತ್ಸವ ಮತ್ತು ಪ್ರತಿಭಾಕಾರಂಜಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಆಸಕ್ತಿಯಿಂದ ಭಾಗವಹಿಸಿದ್ದೀರ, ನಿಮ್ಮ ವಿದ್ಯಾರ್ಥಿ ಜೀವನದಲ್ಲಿ ಈ ಕಾರ್ಯಕ್ರಮ ಶಾಶ್ವತವಾಗಿ ನೆನಪಿನಲ್ಲಿರುತ್ತದೆ ಎಂದು ಸಿಆರ್‌ಪಿ ಟಿ.ವಿ.ತಿಪ್ಪೇಸ್ವಾಮಿ ತಿಳಿಸಿದರು.

ಅವರು, ತಳಕು ಕ್ಲಸ್ಟರ್ ವಿಭಾಗದ ಕಲೋತ್ಸವ ಮತ್ತು ಪ್ರತಿಭಾಕಾರಂಜಿ ಕಾರ್ಯಕ್ರಮವನ್ನು ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಶಿಕ್ಷಣ ಇಲಾಖೆ ಶೈಕ್ಷಣಿಕ ಪ್ರಗತಿಯನ್ನು ಉತ್ತಮ ಪಡಿಸಲು ಪಠ್ಯೇತರ ಚಟುವಟಿಕೆಗಳನ್ನು ಸಹ ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಮುನ್ನಡೆಗೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ಈ ಕಾರ್ಯಕ್ರಮದಲ್ಲಿ



ಪೋಷಕರು ಮತ್ತು ಶಿಕ್ಷಕರ ಸಹಕಾರ ಹೆಚ್ಚಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನಲ್ಲಿರುವ ಪ್ರತಿಭೆಯನ್ನು ಹೊರತರಲು ಈ ಕಾರ್ಯಕ್ರಮ ಹೆಚ್ಚು ಸಹಕಾರಿ ಎಂದರು. ಎಸ್‌ಡಿಎಂಸಿ ಅಧ್ಯಕ್ಷ ತಿಪ್ಪೇಸ್ವಾಮಿ, ಗ್ರಾಮ ಪಂಚಾಯಿತಿ ಸದಸ್ಯ ಕೃಷ್ಣಮೂರ್ತಿ, ಪಿಡಿಒ ಶಶಿರಾಜು, ಪ್ರೌಢಶಾಲಾ ಮುಖ್ಯ ಶಿಕ್ಷಕ ದಯಾನಂದ, ಗ್ರಾಮ ಮುಖಂಡ ಬಸವರೆಡ್ಡಿ, ಪ್ರಭಾರ ಮುಖ್ಯ ಶಿಕ್ಷಕ ಶಿವಮೂರ್ತಿ, ಸಹ ಶಿಕ್ಷಕರಾದ ಕೆ.ಎಸ್.ಶ್ರೀಕಾಂತ್, ನಾಗಲಕ್ಷ್ಮಿ, ರೇಹಾನ, ನಾಗರಾಜು ಉಪಸ್ಥಿತರಿದ್ದರು.

---

# ಸಂತ್ರಸ್ತ ಕುಟುಂಭಕ್ಕೆ ನೌಕರಿಗೆ ಒತ್ತಾಯ

» ಮೊದಲ ಪುಟದಿಂದ

ಈಗಾಗಲೇ 'ಕವಾಡಿಗರಹಟ್ಟಿ ಪ್ರದೇಶದ ಅಭಿವೃದ್ಧಿಗಾಗಿ, ಮೂಲಭೂತ ಸೌಲಭ್ಯಗಳಿಗಾಗಿ ಸರ್ಕಾರದಿಂದ ನಾಲ್ಕುವರೆ ಕೋಟಿ ಮಂಜೂರಾಗಿದ್ದು, ಮತ್ತು ಇನ್ನು ಹಲವಾರು ಬೇಡಿಕೆಗಳು ಸರ್ಕಾರದ ಮುಂದಿದ್ದು, ಜರೂರಾಗಿ ಸರ್ಕಾರ ಮತ್ತು ಜಿಲ್ಲಾಡಳಿತ ಗಮನಹರಿಸಿ, ಬೇಡಿಕೆಗಳನ್ನುಈಡೇರಿಸಿ,ಪರಿಹಾರರೂಪವಾಗಿಪರಿಹಾರಮಾಡುವಂತೆ ಸರ್ಕಾರವನ್ನು ಒತ್ತಾಯಿಸಿದ್ದು, ಇಲ್ಲವಾದಲ್ಲಿ, ಮುಂದಿನ ದಿನಗಳಲ್ಲಿ ರಾಜ್ಯಾಧ್ಯಕ್ಷ ಎನ್.ಮೂರ್ತಿ ಅಧ್ಯಕ್ಷತೆಯಲ್ಲಿ ಈ ಬಗ್ಗೆ ಸಮಾಲೋಚಿಸಿ, ಮುಂದೆ ಪ್ರತಿಭಟನೆಗಳ ರೂಪುರೇಷೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಸರ್ಕಾರವನ್ನು ಎಚ್ಚರಿಸಿದ್ದಾರೆ, ಪತ್ರಿಕಾಗೋಷ್ಠಿಯಲ್ಲಿ ಶಿವಣ್ಣ, ಜೆ.ಜೆ.ಹಟ್ಟಿ, ಚನ್ನಿಗರಾಮಯ್ಯ, ಎಂ.ಆರ್.ಶಾಂತಕುಮಾರ್, ಎನ್. ರಂಗಸ್ವಾಮಿ (ಸಂ), ವೀರಭದ್ರಪ್ಪ ಹಿರೇಗುಂಟನೂರು, ಸುರೇಶ್ ತಮಟಕಲ್ಲು, ಬಿ.ಹೆಚ್.ಪರಮೇಸ್, ವೆಂಕಟೇಶ್ ಸಿಂಗಾಪುರ, ಹೆಚ್. ಹೊನ್ನೂರಪ್ಪ ಇನ್ನು ಮುಂತಾದವರು ಭಾಗವಹಿಸಿದ್ದರು.

## ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ

» ಮೊದಲ ಪುಟದಿಂದ

ಪ್ರತಿಯೊಂದು ಇಲಾಖೆಯ ಸಣ್ಣ ಪುಟ್ಟ ವಿಚಾರಗಳಿಗೂ, ವಿಧವಾ ವೇತನ, ಸಂಧ್ಯಾ ಸುರಕ್ಷಾ ಹಾಗೂ ಜಾತಿ/ಆದಾಯ ದೃಢೀಕರಣ ಪತ್ರ ಇನ್ನಿತರೆ ಕೆಲಸ ಕಾರ್ಯಗಳಿಗೆ ಇ-ಸ್ಟಾಂಪ್‌ನಲ್ಲಿ ಪ್ರಮಾಣಪತ್ರ ಮಾಡಿಕೊಂಡು ಬರುವಂತೆ ತಿಳಿಸುವುದು ವಾಡಿಕೆಯಾಗಿದೆ. ಈ ಹಿಂದಿನ 2013 ರಿಂದ 2018 ಅವಧಿಯ ಸಿದ್ದರಾಮಯ್ಯನವರ ಸರ್ಕಾರವು ಇಂತಹ ಕೆಲಸಗಳಿಗೆ ಬಿಳಿ ಹಾಳೆಯ ಮೇಲೆ ಸ್ವಯಂ ದೃಢೀಕರಣ ಎಂದು ಆದೇಶ ಮಾಡಿರುವುದು ತಾವು ಇದನ್ನು ಜಾರಿ ಮಾಡಿ, ಸಾರ್ವಜನಿಕರ ಕೆಲಸ ಕಾರ್ಯಗಳು, ಸಮಯವಕಾಶವನ್ನು ಉಳಿಸಬೇಕೆಂದು ಕೋರುತ್ತೇನೆ. ಪ್ರತಿಭಟನೆಯ ನೇತೃತ್ವವನ್ನು ಗಣೇಶ್ ವಹಿಸಿದ್ದರು, ರಂಗಸ್ವಾಮಿ, ಇಮಾಂಸಾಬ್, ಸರೋಜಮ್ಮ, ಮೈಲಾರಪ್ಪ ಸಬೀನಾ ಬಾನು ಸೇರಿದಂತೆ ಇತರರು ಭಾಗವಹಿಸಿದ್ದರು.

## ಯಡಿಯೂರಪ್ಪಗೆ ಬಿಜೆಪಿ ನಾಯಕರಿಂದ ಬೆದರಿಕೆ: ರಮೇಶ್ ಬಾಬು

ಜೆಡಿಎಸ್ ▯ ಬಿಜೆಪಿ ಮೈತ್ರಿ ಬಗ್ಗೆ ಯಡಿಯೂರಪ್ಪ ಹೇಳಿದ್ದರು. ಏನು ಮಾತುಕತೆ ಆಗಿದೆ, ಎಷ್ಟು ಹಂಚಿಕೆ ಆಗಿದೆ ಎಂದು ಹೇಳಿದ್ದರು. ನಿನ್ನೆ ನನಗೆ ಏನೂ ಗೊತ್ತಿಲ್ಲ ಎಂದು ಹೇಳಿದ್ದಾರೆ. ಯಡಿಯೂರಪ್ಪ ಅವರಿಗೆ ಬಿಜೆಪಿ ನಾಯಕರು ಬೆದರಿಕೆ ಹಾಕಿದ್ದಾರೆ. ಯಡಿಯೂರಪ್ಪ ಅವರ ಕುಟುಂಬವನ್ನ ಸೈಡ್ ಲೈನ್ ಮಾಡಿದ್ದಾರೆ. ಮೈತ್ರಿ ಮಾತುಕತೆಯಲ್ಲಿ ಯಡಿಯೂರಪ್ಪ ಅವರ ಅಭಿಪ್ರಾಯ ಪಡೆದಿಲ್ಲ. ಯಡಿಯೂರಪ್ಪ ಅವರನ್ನು ಮೂಲೆ ಗುಂಪು ಮಾಡಲು ಜೆಡಿಎಸ್ ಜೊತೆಗೆ ಬಿಜೆಪಿ ಹೋಗುತ್ತಿದೆ ಎಂದು ಕೆಪಿಸಿಸಿ ಉಪಾಧ್ಯಕ್ಷ ರಮೇಶ್ ಬಾಬು ಹೇಳಿದ್ದಾರೆ.

---

# ಉಪನೊಂದಾವಣೆ ಕಚೇರಿಯಲ್ಲಿ ದಿಢೀರ್ ಏರಿಕೆಯಾದ ಸ್ಥಿರಾಸ್ತಿ ಶುಲ್ಕ: ಸಾರ್ವಜನಿಕರ ಖಂಡನೆ

» **ಚಳ್ಳಕೆರೆ**

ನಗರದ ಉಪನೊಂದಾವಣೆ ಅಧಿಕಾರಿಗಳ ಕಚೇರಿಯಲ್ಲಿ ಸ್ಥಿರಾಸ್ತಿ ಮೌಲ್ಯಗಳನ್ನು ತಾಲ್ಲೂಕಿನಾದ್ಯಂತ ಶೇ.100ರಿಂದ 300ರ ತನಕ ಹೆಚ್ಚಿಸಿದ ಕ್ರಮವನ್ನು ಇಲ್ಲಿನ ರಿಯಲ್ ಎಸ್ಟೇಟ್ ಏಜೆನ್ಸಿ ಹಾಗೂ ಸಾರ್ವಜನಿಕರು ಖಂಡಿಸಿ ಮನವಿ ನೀಡಿದರು.

ರಿಯಲ್ ಎಸ್ಟೇಟ್ ಉದ್ಯಮಿಗಳ ಪರವಾಗಿ ಮಾತನಾಡಿದ ನಗರಸಭಾ ಸದಸ್ಯ ವಿ.ವೈ.ಪ್ರಮೋದ್, ಈ ಹಿಂದೆ ಉಪನೊಂದಾವಣೆ ಕಚೇರಿಯಿಂದ ಮೌಖಿಕವಾಗಿ ಶೇ.20ರಿಂದ30 ತನಕ ಹೆಚ್ಚಿಸುವ ಬಗ್ಗೆ ಮಾಹಿತಿ



ನೀಡಲಾಗಿತ್ತು. ಆದರೆ, ಕಚೇರಿ ನೋಟಿಸ್ ಬೋರ್ಡ್‌ನಲ್ಲಿ ಪ್ರಕಟಿಸದೆ ಸಾರ್ವಜನಿಕವಾಗಿ ಯಾವುದೇ ಮಾಹಿತಿ ನೀಡದೆ ಉಪನೊಂದಾವಣೆ ಕಚೇರಿಯಲ್ಲಿ ಸ್ಥಿರಾಸ್ತಿ ಶುಲ್ಕವನ್ನು ಏಕಾಏಕಿ ಹೆಚ್ಚಿಸಿದ್ದಾರೆ. ಇದರಿಂದ ಸಾರ್ವಜನಿಕರಿಗೆ ಹೆಚ್ಚಿನ ಹೊರೆಯಾಗಲಿದೆ. ಬರಪೀಡಿತ ಪ್ರದೇಶದ ಜನರು ಬದುಕುವುದೇ ಕಷ್ಟವಾಗಿರುವಾಗ ಶುಲ್ಕ ಹೆಚ್ಚಳದಿಂದ ಗಾಯದಮೇಲೆ ಬರೆ ಎಳೆದಂತಾಗಿದೆ ಎಂದು ತಿಳಿಸಿದ್ದಾರೆ. ಕೂಡಲೇ ಶುಲ್ಕವನ್ನು ಕಡಿತಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

ನಗರಸಭಾ ಸದಸ್ಯ ಟಿ.ಮಲ್ಲಿಕಾರ್ಜುನ್, ಆರ್. ಜಗದೀಶ್, ಹನುಮಂತಪ್ಪ, ಗೋವಿಂದಪ್ಪ, ರಾಘವೇಂದ್ರ, ತೇಜಸ್ವಿ, ದಿವಾಕರ, ಕೋಟೆಚಂದ್ರಶೇಖರ್ ಮುಂತಾದವರು ಭಾಗಹಿಸಿದ್ದರು.

---

## ಪ್ರಮುಖ ಸುದ್ದಿ

### ವಿಶ್ವಹಿಂದೂಪರಿಷತ್ ಹಿಂದೂಮಹಾ ಗಣಪತಿ ಉತ್ಸವ

# ಧ್ವಜಪೂಜೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ತಾಲ್ಲೂಕಿನ ವಿಶ್ವಹಿಂದೂಪರಿಷತ್, ಭಜರಂಗದಳ ಹಾಗೂ ಹಿಂದುಪರ ಸಂಘಟನೆಗಳ ವತಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಹಿಂದೂಮಹಾ ಗಣಪತಿ ಉತ್ಸವವನ್ನು ಆಚರಿಸುವ ಹಿನ್ನೆಲೆಯಲ್ಲಿ ಧ್ವಜಪೂಜೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ವಿಶ್ವಹಿಂದೂಪರಿಷತ್ ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ವಿಶ್ವಹಿಂದೂಪರಿಷತ್, ಭಜರಂಗದಳದ ವತಿಯಿಂದ ಈ ಬಾರಿ ಗಣೇಶನ ಉತ್ಸವವನ್ನು ಸಂಭ್ರಮ ಸಡಗರಗಳಿಂದ ಆಚರಿಸಲು ನಿರ್ಧರಿಸಲಾಗಿದೆ. ಈಗಾಗಲೇ ಪೂರ್ವಬಾವಿ ಸಭೆ ನಡೆಸಿ ಕಾರ್ಯಕ್ರಮದ ಬಗ್ಗೆ ಸಂಪೂರ್ಣಪಟ್ಟಿ ಸಿದ್ದಪಡಿಸಲಾಗಿದೆ. ಶ್ರೀಗಣೇಶನ ಉತ್ಸವದ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಹಲವಾರು



ಕಾರ್ಯಕ್ರಮಗಳನ್ನು ಈಗಾಗಲೇ ನಮ್ಮ ಸಮಿತಿ ತಯಾರು ಮಾಡಿದೆ. ಜನರು ಸಹ ಈ ಬಾರಿ ಹೆಚ್ಚಿನ ಮಟ್ಟದಲ್ಲಿ ಸಹಕಾರ ನೀಡಬೇಕು ಎಂದರು.

ನಗರ ಘಟಕದ ಅಧ್ಯಕ್ಷ ಕೆ.ಎಂ. ಯತೀಶ್ ಮಾತನಾಡಿ, ಗಣೇಶೋತ್ಸವ ಸಂದರ್ಭದಲ್ಲಿ ಎಲ್ಲರೂ ಪೊಲೀಸ್ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕಿದೆ. ಶ್ರೀಗಣೇಶನ ಮೂರ್ತಿ ಪ್ರತಿಷ್ಠಾಪನೆಯಿಂದ ಹಿಡಿದು ವಿಸರ್ಜನೆಯ ತನಕ ಎಲ್ಲರೂ ಸಂಘಟಿತರಾಗಿ ಪೂಜಾ ಕಾರ್ಯಕ್ರಮಗಳಲ್ಲಿ ತಪ್ಪದೆ ಭಾಗವಹಿಸಿ. ಸಮಿತಿಯ ಎಲ್ಲಾ ಸದಸ್ಯರು ಸೇರಿ ಕಾರ್ಯನಿರ್ವಹಿಸಿದರೆ ಕಾರ್ಯಕ್ರಮ ಯಶಸ್ವಿಯಾಗುತ್ತದೆ ಎಂದರು.

ಗೌರವಾಧ್ಯಕ್ಷ ಹಾಲಿನರೇವಣ್ಣ, ಉತ್ಸವ ಸಮಿತಿ ಅಧ್ಯಕ್ಷ ಸೂರನಹಳ್ಳಿ ವಿಜಯಣ್ಣ, ಶೋಭಾಯಾತ್ರೆಅಧ್ಯಕ್ಷಬಿ.ಎಸ್.ಶಿವಪುತ್ರಪ್ಪ, ಖಜಾಂಚಿ ಲಕ್ಷ್ಮಿಶ್ರೀವತ್ಸ, ಬಿಜೆಪಿ ಮುಖಂಡರಾದಬಾಳೆಮಂಡಿರಾಮದಾಸ್, ಜೆ.ಪಿ.ಜಯಪಾಲಯ್ಯ, ಡಿ.ಸೋಮಶೇಖರಮಂಡಿಮಠ, ಟಿ.ಮಂಜುನಾಥ, ಮನೋಜ್‌ಹೊಸಮನೆ, ಚಿದಾನಂದ, ಮಾತೃಶ್ರೀಮಂಜುನಾಥ, ಸಿದ್ದೇಶ್, ಉಮೇಶ್, ನಾಗೇಶ್‌ಬಾಬು, ಕೃಷ್ಣ, ಸೂರ್ಯ, ಮಹಂತೇಶ್, ದೊರೆನಾಗರಾಜು, ಮಧುಸೂಧನ್, ಮಾರುತಿ, ಅರ್ಚಕ ಪ್ರದೀಪ್‌ಶರ್ಮ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ, ಲೋಕ್ ಅದಾಲತ್ ಯಶಸ್ವಿಗೆ ಅಭಿನಂದನಾ ಕಾರ್ಯಕ್ರಮ

ದಾವಣಗೆರೆ: ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್ 15 ರಂದು ಬೆಳಿಗ್ಗೆ 10:30 ಗಂಟೆಗೆ ನಗರದ ಜಿಲ್ಲಾ ವಕೀಲರ ಭವನದಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ಲೋಕ್ ಅದಾಲತ್ ಯಶಸ್ವಿಗೆ ಅಭಿನಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿ ಎನ್ ಹೆಗಡೆ, ಹಿರಿಯ ಸಿವಿಲ್ ನ್ಯಾಯಾಧೀಶ ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ.ಕರೆಣ್ಣವರ, ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ವಿಜಯಾನಂದ ಜೆ.ವಿ, ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಪ್ರವೀಣ್ ಕುಮಾರ್ ಆರ್. ಎನ್, ಕೌಟುಂಬಿಕ ನ್ಯಾಯಾಲಯ ನ್ಯಾಯಾಧೀಶ ದಶರಥ, ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮತ್ತು ಹೆಚ್.ಟಿ.ಎಫ್.ಸಿ–1 ಶ್ರೀಪಾದ್.ಎನ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಮತ್ತು ಸಿ.ಜೆ.ಎಂ ಶಿವಪ್ಪ ಗಂಗಪ್ಪ ಸಲಗರೆ ಉಪಸ್ಥಿತರಿರುವರು.

### ಕೇಂದ್ರೀಯ ಸೈನಿಕ ಮಂಡಳಿಯಿಂದ ಶಿಷ್ಯವೇತನಕ್ಕಾಗಿ ಅರ್ಜಿ

» **ಚಿತ್ರದುರ್ಗ**

ಕೇಂದ್ರೀಯ ಸೈನಿಕ ಮಂಡಳಿಯಿಂದ ಶಿಷ್ಯವೇತನಕ್ಕೆ ಅರ್ಜಿ ಅಹ್ವಾನಿಸಲಾಗಿದೆ.

ಕೇಂದ್ರಿಯ ಸೈನಿಕ ಮಂಡಳಿಯ ಜಾಲತಾಣ ಫಫಫ.ಎಖಃ.ಉಔಗಿ.ಖಓ ದಲ್ಲಿ ಹವಾಲ್ದಾರ್ ರ್‍ಯಾಂಕ್‌ವರೆಗಿನ ಮಾಜಿ ಸೈನಿಕರ ಮಕ್ಕಳ ಒಂದನೇ ತರಗತಿಯಿಂದ ದ್ವಿತೀಯ ಪಿಯುಸಿ ವರೆಗೆ ವ್ಯಾಸಂಗ ಮಾಡುತ್ತಿರುವವರು 2023ರ ಅಕ್ಟೋಬರ್ 31 ರವರೆಗೆ ಹಾಗೂ ವೃತ್ತಿಪರ ಶಿಕ್ಷಣವಲ್ಲದ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವವರು 2023ರ ನವೆಂಬರ್ 30 ರವರೆಗೆ ಆರ್ಥಿಕ ನೆರವು (ಪೈನಾನ್ಸಿಯಲ್ ಅಸಿಸ್ಟೆನ್ಸ್) ಎಂಬ ಶೀರ್ಷಿಕೆಯಡಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಜೆಸಿಓ ರ್‍ಯಾಂಕ್ ವರೆಗಿನ ಮಾಜಿ ಸೈನಿಕರ ಮಕ್ಕಳು ದ್ವಿತೀಯ ಪಿಯುಸಿಯಲ್ಲಿ 60 ಪ್ರತಿಶತಕ್ಕಿಂತ ಅಧಿಕ ಅಂಕಗಳನ್ನು ಪಡೆದು ವೃತ್ತಿಪರ ಶಿಕ್ಷಣದಲ್ಲಿ ಪದವಿ ವ್ಯಾಸಂಗಕ್ಕಾಗಿ ಪ್ರವೇಶಾತಿ ಪಡೆದ ಮೊದಲನೇ ವರ್ಷದಲ್ಲಿಯೇ ನವೆಂಬರ್ 30 ರೊಳಗಾಗಿ ಪ್ರಧಾನ ಮಂತ್ರಿ ಶಿಷ್ಯವೇತನ ಯೋಜನೆ (ಪ್ರಧಾನ ಮಂತ್ರಿ ಸ್ಕಾಲರ್ಶಿಪ್ ಸ್ಕೀಂ) ಎಂಬ ಶೀರ್ಷಿಕೆಯಡಿಲ್ಲಿ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಇವರ ದೂರವಾಣಿ ಸಂಖ್ಯೆ 08182-220925 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಸಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ. ಹಿರೇಮಠ ಅವರು ಪ್ರಟಣೆಯಲ್ಲಿ ತಿಳಿಸಿದ್ದಾರೆ.

### ಸೆ.18 ರಿಂದ 20 ರವರೆಗೆ ಗೌರಸಮುದ್ರ ಶ್ರೀ ಮಾರಮ್ಮ ದೇವಿ ಜಾತ್ರಾ ಮಹೋತ್ಸವ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕು ತಳಕು ಹೋಬಳಿ ಗೌರಸಮುದ್ರ ಗ್ರಾಮದ ಶ್ರೀ ಮಾರಮ್ಮ ದೇವಿಯ ಜಾತ್ರಾ ಮಹೋತ್ಸವು ಇದೇ ಸೆಪ್ಟೆಂಬರ್ 18 ರಿಂದ 20 ರವರೆಗೆ ನಡೆಯಲಿದೆ.

ಸೆಪ್ಟೆಂಬರ್ 17ರಂದು ಭಾನುವಾರ ಹುತ್ತಕ್ಕೆ ಅಭಿಷೇಕ,18ರಂದು ಸೋಮವಾರ ಮೂಲ ಸನ್ನಿಧಿಗೆ ಅಭಿಷೇಕ, 19ರಂದು ಮಂಗಳವಾರ ಶ್ರೀ ಮಾರಮ್ಮ ದೇವಿಯು ತುಂಬಲಿಗೆ ಆಗಮಿಸಿ, ಗೌರಸಮುದ್ರಕ್ಕೆ ವಾಪಾಸ್ಸಾಗುವುದು, ನಂತರ ರಾತ್ರಿಯೆಲ್ಲಾ ಊರಿನಲ್ಲಿ ದೇವಿಯ ಮೆರವಣಿಗೆ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುವುದು. 20ರಂದು ಬುಧವಾರ ಓಕಳಿ ನಂತರ ರಾತ್ರಿ 8 ಗಂಟೆಗೆ ಶ್ರೀ ಮಾರಮ್ಮದೇವಿಯ ಮೆರವಣಿಗೆ, 21ರಂದು ಗುರುವಾರ ಬೆಳಿಗ್ಗೆ 8.30 ರಿಂದ ಶ್ರೀ ಮಾರಮ್ಮ ದೇವಿಗೆ ಮಹಾಮಂಗಳಾರತಿ ನಂತರ ದೇವಿಯ ಗರ್ಭಗುಡಿ ಪ್ರವೇಶ ನಡೆಯಲಿದೆ.

ಭಕ್ತಾಧಿಗಳಿಗೆ ವಿಶೇಷಸೂಚನೆ:ಹರಕೆಮಾಡಿಕೊಂಡ ಭಕ್ತಾಧಿಗಳು ತುಂಬಲಿಗೆ ಹಾಗೂ ಗೌರಸಮುದ್ರದ ಮೂಲ ದೇವಸ್ಥಾನದಲ್ಲಿ ಎರಡೂ ಕಡೆ ಶ್ರೀ ದೇವಿಗೆ ಹಾಕುವ ಬೆಳ್ಳಿ ಬಂಗಾರದ ಒಡವೆ, ಸೀರೆ ಇತ್ಯಾದಿ ವಸ್ತ್ರಭರಣಗಳನ್ನು ವಿಶೇಷವಾಗಿ ವ್ಯವಸ್ಥೆ ಮಾಡಿರುವ ಹುಂಡಿಯಲ್ಲಿಯೇ ಕಾಣಿಕೆಗಳನ್ನು ಹಾಕುವುದು. ಉಳ್ಳೇಗಡ್ಡೆಗಳನ್ನು (ಈರುಳ್ಳಿ) ದೇವಿಗೆ ಜೋರಾಗಿ ಎಸೆಯುವುದರಿಂದ ದೇವಿಯ ಒಡವೆಗಳು ಕೆಳಗೆ ಬೀಳುತ್ತವೆ. ಜನರಿಗೆ ಕಣ್ಣು ಮತ್ತು ಮುಖಕ್ಕೆ ಪೆಟ್ಟು ಬಿದ್ದು ತುಂಬಾ ತೊಂದರೆಯಾಗಿತ್ತದೆ. ಆದ್ದರಿಂದ ಭಕ್ತಾಧಿಗಳು ಈರುಳ್ಳಿಯನ್ನು ದೇವರ ಸನ್ನಿಧಿಗೆ ಮಾತ್ರ ಅರ್ಪಿಸುವುದು. ಗೌರಸಮುದ್ರ ಗ್ರಾಮ ಪಂಚಾಯಿತಿಯಿಂದ ನೀರಿನ ಸೌಕರ್ಯ, ಸ್ಥಳಗಳ ಸೌಕರ್ಯ ಹಾಗೂ ಇತರೆ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿರುವುದರಿಂದ ಅದನ್ನು ಸದುಪಯೋಗ ಪಡೆದುಕೊಳ್ಳಬೇಕು.

---

**ತಾಲ್ಲೂಕು ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಶಾಸಕ ರಘುಮೂರ್ತಿ ಕರೆ**

# ಉತ್ತಮ ಆಟ ಪ್ರದರ್ಶಿಸಿ ರಾಜ್ಯ, ರಾಷ್ಟ್ರಮಟ್ಟದ ಕ್ರೀಡಾಪಟುಗಳಾಗಿ ಚಳ್ಳಕೆರೆ ಕೀರ್ತಿ ಹೆಚ್ಚಿಸಿ

» **ಚಳ್ಳಕೆರೆ**

ಚಳ್ಳಕೆರೆ ತಾಲ್ಲೂಕು ವೈಜ್ಞಾನಿಕ ಕ್ಷೇತ್ರದಲ್ಲಿ ತನ್ನದೇಯಾದ ವೈವಿಧ್ಯತೆಯನ್ನು ದಾಖಲೆ ಮಾಡುವಲ್ಲಿ ಯಶಸ್ವಿ ಹೆಜ್ಜೆ ಇಡುತ್ತಿದೆ. ಸಾಹಿತ್ಯ ಕ್ಷೇತ್ರದಲ್ಲೂ ಸಹ ಇಲ್ಲಿನ ಕೊಡುಗೆ ಅಪಾರ. ಅದೇ ರೀತಿ ಕ್ರೀಡಾ ಕ್ಷೇತ್ರದಲ್ಲೂ ರಾಷ್ಟ್ರೀಯ ಕ್ರೀಡಾಪಟುಗಳನ್ನು ಗುರುತಿಸಿ ಕೀರ್ತಿ ಈ ತಾಲ್ಲೂಕಿದ್ದು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.



ಅವರು, ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ತಾಲ್ಲೂಕು ಮಟ್ಟದ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಕ್ರೀಡಾಕೂಟವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರಸ್ತುತ ಈ ವರ್ಷ ಎಲ್ಲಾ ಹಂತದಲ್ಲೂ ಕ್ರೀಡಾಪಟುಗಳು ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಿದ್ದಾರೆ. ತಾಲ್ಲೂಕು ಮಟ್ಟದಲ್ಲಿ ವಿಜೇತರಾದವರು ಜಿಲ್ಲಾ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ವಿಜೇತರಾದವರು ವಿಭಾಗ ಮಟ್ಟದಲ್ಲಿ, ವಿಭಾಗ ಮಟ್ಟದಲ್ಲಿ ವಿಜೇತರಾದವರು ರಾಜ್ಯಮಟ್ಟದಲ್ಲಿ ತಮ್ಮ ಪ್ರದರ್ಶನವನ್ನು ನೀಡಲಿದ್ದು, ಗೆಲುವು ಸಾಧಿಸಿದ ಎಲ್ಲಾ ಕ್ರೀಡಾಪಟುಗಳನ್ನು ಅಭಿನಂದಿಸುವುದಾಗಿ ತಿಳಿಸಿದರಲ್ಲದೆ, ಸೋಲಿನಿಂದ ಯಾರೂ ಹತಾಶರಾಗದೆ ಮುಂದಿನ ವಿಜಯಕ್ಕಾಗಿ ಸಂಕಲ್ಪ ಮಾಡಿಕೊಂಡು ಆಟವನ್ನು ಮುಂದುವರೆಸಬೇಕು. ಕ್ರೀಡೆಯಿಂದ ನಿಮ್ಮೆಲ್ಲರ ಭವಿಷ್ಯದ ಬದುಕು ಉತ್ತಮಗೊಳ್ಳಲಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ತಾಲ್ಲೂಕಿನ ಒಟ್ಟು 14 ಕ್ಲಸ್ಟರ್ ವಿಭಾಗದ ಸುಮಾರು 1800ಕ್ಕೂ ಹೆಚ್ಚು ಕ್ರೀಡಾಪಟುಗಳು ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿದ್ದಾರೆ. ಕಳೆದ ಸುಮಾರು 10ದಿನಗಳಿಂದ ಆಟ ಮುಂದುವರೆದಿದ್ದು, ದೈಹಿಕ ಶಿಕ್ಷಕರು, ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ಮಕ್ಕಳನ್ನು ಕ್ರೀಡಾಪಟುಗಳನ್ನಾಗಿ ಮಾಡುವಲ್ಲಿ ಹೆಚ್ಚು ಶ್ರಮಿಸಿದ್ದಾರೆ. ಎಲ್ಲರ ಪರಿಶ್ರಮದಿಂದ ಕ್ರೀಡೆಯೂ ಸಹ ಇಂದು ಉತ್ತಮ ಮಟ್ಟದಲ್ಲಿದೆ. ವಿಶೇಷವಾಗಿ ಪರಶುರಾಮಪುರ ಕರ್ನಾಟಕ ಪಬ್ಲಿಕ್ ಶಾಲೆಯ ಮೂವರು ವಿದ್ಯಾರ್ಥಿಗಳು ವಾಲಿಬಾಲ್‌ನಲ್ಲಿ, ನಗರದ ಕಿತ್ತೂರು ರಾಣಿಚನ್ನಮ್ಮ ಪ್ರೌಢಶಾಲೆಯ ಬಾಲಕ–ಬಾಲಕಿಯರ ತಂಡ ಹ್ಯಾಂಡ್‌ಬಾಲ್‌ನಲ್ಲಿ ವಿಭಾಗ ಮಟ್ಟಕ್ಕೆ ತಲುಪಿದೆ. ಚಳ್ಳಕೆರೆ ಕ್ರೀಡಾಪಟುಗಳಾದ ಅಶ್ವಿನಿ, ಶ್ವೇತ, ಸ್ಪಂದನ, ರಾಜ್ಯಮಟ್ಟದ ಆಟಗಾರರಾಗಿದ್ದು ಸರ್ಕಾರದಿಂದ ಉತ್ತಮ ಮೊತ್ತದ ವಿದ್ಯಾರ್ಥಿವೇತನ ಪಡೆಯುತ್ತಿದ್ದಾರೆ. ಕ್ರೀಡೆಯನ್ನು ಯಾರೂ ಲಘುವಾಗಿ ಪರಿಗಣಿಸಬಾರದು ಎಂದರು.


ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಸಹ ಕಾರ್ಯದರ್ಶಿ ಸಿ.ಟಿ.ವೀರೇಶ್, ತಾಲ್ಲೂಕು ಅಧ್ಯಕ್ಷ ಶಿವಲಿಂಗಪ್ಪ, ರಾಜಣ್ಣ, ಗುರುಮೂರ್ತಿ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ರಾಜಣ್ಣ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ರಾಜಕುಮಾರ್, ಕಾರ್ಯದರ್ಶಿ ವೀರಣ್ಣ, ಓಬಣ್ಣ, ಭೀಮಣ್ಣ, ಸಣ್ಣಸೂರಮ್ಮ, ನಗರಸಭಾ ಸದಸ್ಯರಾದ ಕವಿತಾ, ಸುಮಾ, ತಾಲ್ಲೂಕಿನ ವಿವಿಧ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು, ದೈಹಿಕ ಶಿಕ್ಷಕರುಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುನ್ನ ಕ್ರೀಡಾಜ್ಯೋತಿಯನ್ನು ಶಾಸಕ ಟಿ.ರಘುಮೂರ್ತಿ ಸ್ವೀಕರಿಸಿದರು.

---

# ಇಲಾಹಿ ಸೊಸೈಟಿಗೆ 35 ಲಕ್ಷ ರೂ ಲಾಭ

» **ಚಿತ್ರದುರ್ಗ**

ಶೇರುದಾರ ಸದಸ್ಯರು ಹಾಗೂ ಸಿಬ್ಬಂದಿಗಳ ಸಹಕಾರದಿಂದ ಇಲಾಹಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ 2022-23 ನೇ ಸಾಲಿಗೆ 35 ಲಕ್ಷ 83 ಸಾವಿರದ 481 ರೂ.ಗಳ ಲಾಭ ಗಳಿಸಿದೆ ಎಂದು ಸೊಸೈಟಿ ಅಧ್ಯಕ್ಷ ಮಹಮದ್ ನಿಜಾಮುದ್ದಿನ್ ಹರ್ಷ ವ್ಯಕ್ತಪಡಿಸಿದರು.



ಅಗಸನಕಲ್ಲು ಟಿ.ಎಂ.ಕೆ.ಕಾಂಪೌಂಡ್‌ನಲ್ಲಿರುವ ಅಹಮದ್ ಪ್ಯಾಲೇಸ್‌ನಲ್ಲಿ ಗುರುವಾರ ನಡೆದ ಇಲಾಹಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ 59 ನೇ ವರ್ಷದ ಸರ್ವ ಸದಸ್ಯರ ಸಾಮಾನ್ಯ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

59 ವರ್ಷಗಳಿಂದ ಇಲಾಹಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಮುನ್ನೆಡೆದುಕೊಂಡು ಬರುತ್ತಿರುವುದಕ್ಕೆ ಅನೇಕರ ಪರಿಶ್ರಮವಿದೆ. ಹತ್ತು ರೂ.ಶೇರು ಹಣದಿಂದ ಆರಂಭಗೊಂಡ ಸೊಸೈಟಿಯಲ್ಲಿ ಈಗ 13 ಲಕ್ಷ ರೂ. ಶೇರು ಹಣವಿದೆ. ಇಪ್ಪತ್ತು ಕೋಟಿ ರೂ.ವಹಿವಾಟಾಗಿದ್ದು, ನಾಲ್ಕರಿಂದ ಐದು ಕೋಟಿ ರೂ. ರೇವಣಿಯಿದೆ. ಶೇರುದಾರ ಸದಸ್ಯರಲ್ಲಿ ಯಾವುದೇ ಕಾರಣಕ್ಕೂ ಸೊಸೈಟಿ ಬಗ್ಗೆ ಅಪನಂಬಿಕೆ ಬೇಡ ಎಂದು ಮನವಿ ಮಾಡಿದರು.

ಸಾಲ ಮರುಪಾವತಿಗೆ ಹೋಗಲು ಲಾಭದ ಹಣದಲ್ಲಿ ಹತ್ತು ಲಕ್ಷ ರೂ. ಬೆಲೆಯ ಬೊಲೆರೋ ಎರಡು ದ್ವಿಚಕ್ರ ವಾಹನ ಖರೀಧಿಸಲಾಗಿದೆ. ಸಿ.ಸಿ. ಕ್ಯಾಮರಾ ಅಳವಡಿಸಲಾಗಿದ್ದು, ಕೋವಿಡ್ ಲಾಕ್‌ಡೌನ್‌ಸಂದರ್ಭದಲ್ಲಿಆಹಾರದಕಿಟ್‌ಗಳನ್ನು ವಿತರಿಸಿದ್ದೇವೆ. ಆರೋಗ್ಯ ತಪಾಸಣಾ ಶಿಬಿರ ಕೂಡ ನಡೆದಿದೆ. ಮುಂದಿನ ದಿನಗಳಲ್ಲಿ ಎನಪೈ, ನಾರಾಯಣ ಹೃದಯಾಲಯದ ವೈದ್ಯರನ್ನು ಕರೆಸಿ ಆರೋಗ್ಯ ತಪಾಸಣೆ ನಡೆಸಲಾಗುವುದು. 2025 ರಲ್ಲಿ ನಡೆಯುವ ಚುನಾವಣೆಯಲ್ಲಿ ನಮ್ಮ ತಂಡವನ್ನು ಮತ್ತೆ ಗೆಲ್ಲಿಸಿದರೆ ಸೊಸೈಟಿಗೆ ನೂತನ ಕಟ್ಟಡ ನಿರ್ಮಿಸಲಾಗುವುದು. ಇದಕ್ಕೆ ನಿಮ್ಮೆಲ್ಲರ ಸಹಕಾರ ಅತ್ಯವಶ್ಯಕ ಎಂದು ಕೋರಿದರು.

ಹಿಂದೆ ಐದರಿಂದ 25 ಸಾವಿರ ರೂ ಶ್ಯೂರಿಟಿ ಲೋನ್ ಕೊಡಲಾಗುತ್ತಿತ್ತು. ಈಗ ಅದನ್ನು ಒಂದುವರೆ ಲಕ್ಷ ರೂ.ಗಳಿಗೆ ಏರಿಸಲಾಗುವುದು ಎಂದು ಘೋಷಿಸಿದ ಇಲಾಹಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ಮಹಮದ್ ನಿಜಾಮುದ್ದಿನ್ ಸೊಸೈಟಿಯಲ್ಲಿ ಸಾಲ ಪಡೆದವರು ಪ್ರಾಮಾಣಿಕವಾಗಿ ಹಿಂದಿರುಗಿಸಬೇಕು. ಸಾಲ ವಸೂಲಾತಿಗೆ ಸಂಬಂಧಿಸಿದಂತೆ ಜಾಮೀನುದಾರರ ಜವಾಬ್ದಾರಿ ಕೂಡ ಜಾಸ್ತಿಯಿದೆ ಎಂದು ತಿಳಿಸಿದರು.

ಇಲಾಹಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಉಪಾಧ್ಯಕ್ಷ ಮಹಮದ್ ಶಫಿ, ಗೌರವ ಕಾರ್ಯದರ್ಶಿ ಸೈಯದ್ ದಾದಾಪೀರ್, ನಿರ್ದೇಶಕರುಗಳಾದ ಮಹಮದ್ ಹಫೀಜ್, ಜಮೀಲ್ ಅಹಮದ್, ನಯಾಜ್ ಅಹಮದ್, ಸಾಧಿಕ್‌ಭಾಷ, ಶ್ರೀಮತಿ ಅಪ್ಸರಭಾನು, ಶ್ರೀಮತಿ ಉಮ್ಮೆ ತಸ್ಮಿಯಾಭಾನು, ಅಮ್ಜಾದ್‌ಭಾಷ, ಶಬ್ಬೀರ್‌ಖಾನ್, ವ್ಯವಸ್ಥಾಪಕ ಎಂ.ಐ.ಎ. ಪಾಷ ವೇದಿಕೆಯಲ್ಲಿದ್ದರು.

ಡಿ.ಸಿ.ಸಿ.ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ್‌ಉಲ್ಲಾ ಶರೀಫ್, ಜಾನಪದ ಹಾಡುಗಾರ ಹರೀಶ್ ಇವರುಗಳನ್ನು ಸನ್ಮಾನಿಸಲಾಯಿತು.

ಎಸ್.ಎಸ್.ಎಲ್.ಸಿ. ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಪಡೆದಿರುವ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕರಿಸಲಾಯಿತು.

## ಉಪಕರಣಗಳ ಕೊಡುಗೆ

ಚಿತ್ರದುರ್ಗ: ತಾಲ್ಲೂಕಿನ ಮಾಡನಾಯಕನಹಳ್ಳಿಯಲ್ಲಿರುವ ಪಟೇಲ್ ಬಸಣ್ಣ ಪ್ರೌಢಶಾಲೆಗೆ ವಿಜ್ಞಾನ ಉಪಕರಣಗಳು ಮತ್ತು ಕಲಿಕಾ ಸಾಮಾಗ್ರಿಗಳನ್ನು ಹಿರಿಯೂರಿನ ಶ್ರೀಮತಿ ಎಂ.ಆರ್.ಲಕ್ಷ್ಮಿ ಮತ್ತು ಎಂ.ಆರ್.ರಾಮಸ್ವಾಮಿ ಅಕ್ಸಲರೇಟ್ ಇಂಡಿಯಾ ಫೌಂಡೇಶನ್ ಟ್ರಸ್ಟ್ ಬೆಂಗಳೂರಿನ ಶ್ರೀಮತಿ ಸ್ನೇಹ ಮತ್ತು ನಂದಕುಮಾರ್ ಇವರುಗಳು ಕೊಡುಗೆಯಾಗಿ ನೀಡಿದರು. ಮುಖ್ಯ ಶಿಕ್ಷಕ ಟಿ.ಶ್ರೀನಿವಾಸ್, ವಿಜ್ಞಾನ ಶಿಕ್ಷಕ ಮೃತ್ಯುಂಜಯಸ್ವಾಮಿ ಹಾಗೂ ಶಿಕ್ಷಕ ವೃಂದದವರು ಈ ಸಂದರ್ಭದಲ್ಲಿದ್ದರು.



## ಸಚಿವ ಸುಧಾಕರ್ ಸಂಪುಟದಿಂದ ವಜಾಗೊಳಿಸುವಂತೆ ಕರುನಾಡ ವಿಜಯಸೇನೆಯಿಂದ ಪ್ರತಿಭಟನೆ



» **ಚಿತ್ರದುರ್ಗ**

ದಲಿತ ಮತ್ತು ಬ್ರಾಹ್ಮಣರನ್ನು ಅವಹೇಳನವಾಗಿ ನಿಂಧಿಸಿರುವುದಲ್ಲದೆ ಬಡವರ ಆಸ್ತಿಯನ್ನು ಕಬಳಿಸಿರುವ ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್‌ರವರನ್ನು ಕೂಡಲೆ ಬಂಧಿಸಿ ಸಿಬಿಐ. ಅಥವಾ ಸಿಓಡಿ ತನಿಖೆಗೆ ಒಳಪಡಿಸುವಂತೆ ಒತ್ತಾಯಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.ದಲಿತರ ಮತ್ತು ಹಿಂದುಳಿದವರ ಮತಗಳನ್ನು ಪಡೆದು ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್‌ನಲ್ಲಿ ಸಚಿವರಾಗಿರುವ ಡಿ.ಸುಧಾಕರ್ ದಲಿತರ ಮೇಲೆ ದೌರ್ಜನ್ಯ ನಡೆಸಿ ಮೋಸ ವಂಚನೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಕೂಡಲೆ ಸಚಿವ ಸಂಪುಟದಿಂದ ವಜಾಗೊಳಿಸಬೇಕೆಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಕಾರ್ಯದರ್ಶಿ ಜಗದೀಶ್, ಮಹಮದ್ ರಫಿ, ದ್ರುವಕುಮಾರ್, ಹರ್ಷ, ವಿಶ್ವನಾರಾಯಣಮೂರ್ತಿ, ಪ್ರದೀಪ್, ಅವಿನಾಶ್, ಅಭಿಷೇಕ್, ಕೋಟೇಶ್ ಇನ್ನು ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ನೇಮಕಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ: ಜಿಲ್ಲೆಯ ಜಿಲ್ಲಾ ಮಟ್ಟದ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿ ನಿಷೇಧ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ಮುಂದಿನ ಮೂರು ವರ್ಷಗಳ ಅವಧಿಗೆ 5 ಜನ ನಾಮ ನಿರ್ದೇಶಿತ ಸದಸ್ಯರನ್ನು ನೇಮಕ ಮಾಡಿಕೊಳ್ಳಲು ಸ್ಥಳೀಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು ಕಚೇರಿ, ಸಮಾಜ ಕಲ್ಯಾಣ ಇಲಾಖೆ, ವಿನೋಬನಗರ, ಶಿವಮೊಗ್ಗ ಸಂಪರ್ಕಿಸುವುದು.

---

**ಪ್ರಮುಖ ಸುದ್ದಿ**

# ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ

» **ಚಿತ್ರದುರ್ಗ**

ಮಹಾತ್ಮ ಗಾಂಧೀಜಿಯವರ 154ನೇ ಜಯಂತಿ ಸಂದರ್ಭದಲ್ಲಿ ವಿದ್ಯಾರ್ಥಿ, ಯುವಜನರಲ್ಲಿಮಹಾತ್ಮಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ–ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಆಯೋಜಿಸಿದೆ.


ಜಿಲ್ಲಾ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 3 ಸಾವಿರ ರೂ, 2 ಸಾವಿರ ರೂ. ಹಾಗೂ 1 ಸಾವಿರ ರೂ. ಹಾಗೂ ರಾಜ್ಯ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 31 ಸಾವಿರ ರೂ, 21 ಸಾವಿರ ರೂ. ಹಾಗೂ 11 ಸಾವಿರ ರೂ. ನಗದು ಬಹುಮಾನ ನೀಡಲಾಗುವುದು.

**ಪ್ರೌಢ ಶಾಲಾ ವಿಭಾಗ :–**

1) ನನಗೇಕೆ ಗಾಂಧೀಜಿ ಇಷ್ಟವಾಗುತ್ತಾರೆ.
2) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ.
3) ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ. ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು. ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು

**ಪದವಿ ಪೂರ್ವ ಶಿಕ್ಷಣ ವಿಭಾಗ:**

1) ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು.
2) ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ.
3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು



ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು.

**ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ**

:1)ದೇಶನಿರ್ಮಾಣದಲ್ಲಿಗಾಂಧೀಜಿಯವರ ಜಾತ್ಯಾತೀತ ನಿಲುವುಗಳು.
2) ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು.
3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ.
4) ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು. ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು.

ಎಲ್ಲಾ ವಿಭಾಗಗಳ ವಿದ್ಯಾರ್ಥಿಗಳು ತಾವು ರಚಿಸಿದ ಪ್ರಬಂಧಗಳನ್ನು ತಮ್ಮ ಸಂಸ್ಥೆಗಳ ಮುಖ್ಯಸ್ಥರಿಗೆ ಗುರುತಿನ ಚೀಟಿ ಹಾಗೂ ಸಂಪರ್ಕ ವಿವರಗಳನ್ನು ಲಗತ್ತಿಸಿ ಸಲ್ಲಿಸಬೇಕು. ಪ್ರತಿ ಶಾಲೆ / ಕಾಲೇಜು / ಸ್ನಾತಕೋತ್ತರ ಪದವಿ ವಿಭಾಗಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಲ್ಲಿನ ಆಯ್ದ ಅತ್ಯುತ್ತಮವಾದ ಮೂರು ಪ್ರಬಂಧಗಳನ್ನು ದಿನಾಂಕ : 26-09-2023 ರೊಳಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಿಲ್ಲಾ ಕಚೇರಿಗಳಿಗೆ ತಲುಪಿಸಬೇಕು.

ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮವೆನಿಸಿದ ಪ್ರತಿ ವಿಭಾಗದಲ್ಲಿನ ಮೂರು (3) ಪ್ರಬಂಧಗಳನ್ನು ಆಯ್ಕೆ ಮಾಡಿ ಜಿಲ್ಲಾ ವಾರ್ತಾಧಿಕಾರಿಗಳು 29 ರೊಳಗೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು, ಇವರಿಗೆ ಸಲ್ಲಿಸುವರು. ಅವುಗಳಲ್ಲಿ ಅತ್ಯುತ್ತಮವಾದ ಪ್ರಬಂಧಗಳಿಗೆ ರಾಜ್ಯಮಟ್ಟದಲ್ಲಿ ಬಹುಮಾನ ನೀಡಲಾಗುವುದು.

ಪ್ರಬಂಧ ರಚಿಸಲು ಮಾರ್ಗಸೂಚಿಗಳು: ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಪ್ರಬಂಧವು ಕನ್ನಡದಲ್ಲಿ ಶುದ್ಧ ಕೈಬರಹ ಅಥವಾ ನುಡಿ ಇಲ್ಲವೇ ಯೂನಿಕೋಡ್ ತಂತ್ರಾಂಶದಲ್ಲಿ ಬೆರಳಚ್ಚು ಮಾಡಿರಬೇಕು. ಆಕರವಾಗಿ ಬಳಸಿದ ಪರಾಮರ್ಶನ / ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಶಾಲೆ / ಕಾಲೇಜುಗಳ ಮುಖ್ಯಸ್ಥರುಗಳ ಮೂಲಕವೇ ಜಿಲ್ಲಾ ವಾರ್ತಾಧಿಕಾರಿಗಳಿಗೆ ಪ್ರಬಂಧಗಳನ್ನು ತಲುಪಿಸಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

## ಫಾಸ್ಟ್ ನ್ಯೂಸ್

### ಸೆ.16ರಂದು ಕಾನೂನು ಅರಿವು ನೆರವು

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಹಾಗೂ ಎಸ್.ಜೆ.ಎಂ ಕಾಲೇಜು ಆಫ್ ಫಾರ್ಮಸಿ ಇವರ ಸಂಯುಕ್ತಾಶ್ರಯದಲ್ಲಿ ಇದೇ ಸೆಪ್ಟೆಂಬರ್ 16ರಂದು ಬೆಳಿಗ್ಗೆ 10.30 ಗಂಟೆಗೆ ಚಿತ್ರದುರ್ಗ ನಗರದ ಎಸ್.ಜೆ.ಎಂ. ಕಾಲೇಜು ಆಫ್ ಫಾರ್ಮಸಿ ಸಭಾಂಗಣದಲ್ಲಿ "ಕಾನೂನು ಸಾಕ್ಷರತಾ ಮತ್ತು ಮಾದಕ ವ್ಯಸನದ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಕಾರ್ಯಕ್ರಮ ಉದ್ಘಾಟಿಸುವರು. ಎಸ್.ಜೆ.ಎಂ ಕಾಲೇಜು ಆಫ್ ಫಾರ್ಮಸಿ ಪ್ರಾಚಾರ್ಯ ಡಾ.ಟಿ.ಎಸ್. ನಾಗರಾಜ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅಥಿತಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್, ಎಸ್.ಜೆ.ಎಂ. ಕಾಲೇಜು ಆಫ್ ಫಾರ್ಮಸಿಯ ಪ್ರಾಂಶುಪಾಲ ಮಾರುತಿ ಟಿ ಏಕಬೋಟೆ ಭಾಗವಹಿಸುವರು. ಮಾದಕ ವ್ಯಸನ ಮತ್ತು ಅದರ ದುಷ್ಪಾರಿಣಾಮಗಳ ಕುರಿತು ಆರೋಗ್ಯಾಧಿಕಾರಿ ಡಾ.ಆರ್.ಮಂಜುನಾಥ್ ಹಾಗೂ ಅಬಕಾರಿ ನಿರೀಕ್ಷಕ ಶೇಖ್ ಇಮ್ರಾನ್ ಎನ್.ಡಿ.ಪಿ.ಎಸ್ ಕಾಯ್ದೆ ಕುರಿತು ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ಸೆ.16ರಂದು ಮ್ಯಾರಥಾನ್ ಸ್ಪರ್ಧೆ

» ಚಿತ್ರದುರ್ಗ

ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ವತಿಯಿಂದ ಹೆಚ್.ಐ.ವಿ/ಏಡ್ಸ್ ಕುರಿತು ಜಿಲ್ಲಾಮಟ್ಟದಲ್ಲಿ "ಯುವಜನೋತ್ಸವ"ದ ಅಂಗವಾಗಿ ರಾಷ್ಟ್ರೀಯ ಏಡ್ಸ್ ನಿಯಂತ್ರಣ ಮಂಡಳಿ ಮಾರ್ಗಸೂಚಿಯನ್ವಯ ಕಾಲೇಜು ವಿದ್ಯಾರ್ಥಿಗಳಿಗೆ ಇದೇ ಸೆಪ್ಟೆಂಬರ್ 16ರಂದು ಬೆಳಿಗ್ಗೆ 7 ಗಂಟೆಯಿಂದ 9 ಗಂಟೆಯವರೆಗೆ 5 ಕಿ.ಮೀ ಮ್ಯಾರಥಾನ್ (Red Ribbon Run-Youth ಜಿಂಡಿ ಊಘಗಿ/ಂಙಆಖ) ಸ್ಪರ್ಧೆ ಏರ್ಪಡಿಸಲಾಗಿದೆ.ಮ್ಯಾರಥಾನ್ ಸ್ಪರ್ಧೆಯು ಕನಕ ವೃತ್ತ, ಮುಖ್ಯವೃತ್ತ, ಪ್ರವಾಸಿ ಮಂದಿರ, ಆಸ್ಪತ್ರೆ ವೃತ್ತ ಮಾರ್ಗವಾಗಿ ಒನಕೆ ಓಬವ್ವ ಸ್ಟೇಡಿಯಂ ತಲುಪಲಿದೆ. 5 ಕಿ.ಮೀ ಮ್ಯಾರಥಾನ್ ಮಾರ್ಗಸೂಚಿಗಳು: 17 ರಿಂದ 25 ವರ್ಷದ ಕಾಲೇಜು ವಿದ್ಯಾರ್ಥಿಗಳು, ರೆಡ್ ರಿಬ್ಬನ್ ಕ್ಲಬ್ ಸದಸ್ಯರುಗಳು ಮಾತ್ರ ಮ್ಯಾರಥಾನ್‌ನಲ್ಲಿ ಭಾಗವಹಿಸಬೇಕು. ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯು ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಬೇಕಾಗುತ್ತದೆ. ಸ್ಪರ್ಧಿಗಳಿಗೆ ಯಾವುದೇ ಪ್ರವಾಸ ಭತ್ಯೆಗಳಿರುವುದಿಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಉಪಹಾರದ ವ್ಯವಸ್ಥೆ ಇರುತ್ತದೆ. ಬಹುಮಾನದ ವಿವರ: ವಿದ್ಯಾರ್ಥಿಗಳಿಗೆ (ಗಂಡು) ವಿದ್ಯಾರ್ಥಿನಿಯರಿಗೆ (ಹೆಣ್ಣು) ಬಹುಮಾನ ನೀಡಲಾಗುವುದು. ಮೊದಲನೇ ಬಹುಮಾನ ರೂ.5000/-, ದ್ವಿತೀಯ ಬಹುಮಾನ ರೂ.3500/- ಹಾಗೂ ತೃತೀಯ ಬಹುಮಾನ ರೂ.2500/- ಬಹುಮಾನ ನೀಡಲಾಗುವುದು. ರೂ.1000/-ದಂತೆ ನಾಲ್ಕು ವಿದ್ಯಾರ್ಥಿಗಳಿಗೆ ಹಾಗೂ ಮೂರು ವಿದ್ಯಾರ್ಥಿನಿಯರಿಗೆ ಒಟ್ಟು 7 ಮಂದಿಗೆ ಸಮಾಧಾನಕರ ಬಹುಮಾನ ನೀಡಲಾಗುವುದು. ವಿಜೇತರಿಗೆ ಬಹುಮಾನದ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದು. ಸೆ.15ರೊಳಗೆ ನೊಂದಾಯಿಸಿಕೊಳ್ಳುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9845674099, 9739394368 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

### ಅನಿರೀಕ್ಷಿತ ದಾಳಿ, 3 ಬಾಲ ಕಾರ್ಮಿಕರ ಪತ್ತೆ, ಮಾಲಿಕರ ವಿರುದ್ಧ ಕ್ರಮ

» ದಾವಣಗೆರೆ

ದಾವಣಗೆರೆ ನಗರದಲ್ಲಿ ಸೆಪ್ಟೆಂಬರ್ 14 ರಂದು ಬಾಲಕಾರ್ಮಿಕರು ಮತ್ತು ಕಿಶೋರ ಕಾರ್ಮಿಕರು ದುಡಿಯುತ್ತಿರುವ ಕ್ಷೇತ್ರಗಳಿಗೆ ಅನಿರೀಕ್ಷಿತ ದಾಳಿ ಮಾಡಿ 3 ಜನ ಬಾಲಕಾರ್ಮಿಕರ ಪತ್ತೆ ಮಾಡಲಾಗಿದೆ.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ ಕರೆಣ್ಣವರ ಹಾಗೂ ಸಹಾಯಕ ಕಾರ್ಮಿಕ ಆಯುಕ್ತರಾದ ವೀಣಾ ಎಸ್.ಆರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ. ಇಬ್ರಾಹಿಂ ಸಾಬ್, ಕಾರ್ಮಿಕ ನಿರೀಕ್ಷಕರಾದ ರಾಜಪ್ಪ, ನಾಗೇಶ್, ರಾಜಶೇಖರ, ಯೋಜನಾ ನಿರ್ದೇಶಕರಾದ ಪ್ರಸನ್ನ, ಮಕ್ಕಳ ರಕ್ಷಣಾ ಘಟಕದ ಕೆ.ಆರ್.ಹಾಲೇಶ, ಹಾಗೂ ಪೋಲೀಸ್ ಸಿಬ್ಬಂದಿಗಳು ಇವರ ನೇತೃತ್ವದಲ್ಲಿ ಅನಿರೀಕ್ಷಿತ ದಾಳಿಯಲ್ಲಿ ಪತ್ತೆಯಾದ 3 ಮಕ್ಕಳನ್ನು ಪುನರ್ ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿಯ ವಶಕ್ಕೆ ನೀಡಲಾಗಿದ್ದು, ಮಾಲೀಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ.ಕರೆಣ್ಣವರ ತಿಳಿಸಿದ್ದಾರೆ.




# ಪೌಷ್ಟಿಕಾಂಶ ಕೊರತೆಗಳಿಗೆ ಪರಿಹಾರಗಳು

ನಾವು ಏನು ತಿನ್ನುತ್ತೇವೆಯೋ ಅದು ನಮ್ಮ ಆರೋಗ್ಯವನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆದಾಗ್ಯೂ, ಕಳಪೆ ಆಹಾರದ ಆಯ್ಕೆಗಳು, ಜೀವನಶೈಲಿ ಅಭ್ಯಾಸಗಳು ಮತ್ತು ಕೆಲವು ವೈದ್ಯಕೀಯ ಪರಿಸ್ಥಿತಿಗಳು ಪೌಷ್ಟಿಕಾಂಶದ ಕೊರತೆಗಳಿಗೆ ಕಾರಣವಾಗಬಹುದು. ಈ ನ್ಯೂನತೆಗಳನ್ನು ಗುರುತಿಸುವುದು ಮತ್ತು ಪರಿಹರಿಸುವುದು ಅತ್ಯುತ್ತಮ ಆರೋಗ್ಯವನ್ನು ಖಚಿತಪಡಿಸಿಕೊಳ್ಳಲು ನಿರ್ಣಾಯಕವಾಗಿದೆ. ಇಲ್ಲಿ ಕೆಲವು ಸಾಮಾನ್ಯ ಪೌಷ್ಟಿಕಾಂಶದ ಕೊರತೆಗಳು ಮತ್ತು ಅವುಗಳನ್ನು ಹೇಗೆ ಸರಿಪಡಿಸುವುದು.

### ವಿಟಮಿನ್ ಡಿ ಕೊರತೆ

- **ವಿಟಮಿನ್ ಡಿ ಅಥವಾ 'ಸನ್ಶೈನ್' ವಿಟಮಿನ್ ನಿಮ್ಮ ಮೂಳೆಯ ಆರೋಗ್ಯ, ಪ್ರತಿರಕ್ಷಣಾ ಕಾರ್ಯ ಮತ್ತು ಒಟ್ಟಾರೆ ಯೋಗಕ್ಷೇಮಕ್ಕೆ ಅವಶ್ಯಕವಾಗಿದೆ. ಈ ವಿಟಮಿನ್ ಕೊರತೆಯು ದುರ್ಬಲಗೊಂಡ ಮೂಳೆಗಳು, ಸೋಂಕುಗಳಿಗೆ ಒಳಗಾಗುವ ಸಾಧ್ಯತೆ ಮತ್ತು ಆಯಾಸಕ್ಕೆ ಕಾರಣವಾಗಬಹುದು. ವಿಟಮಿನ್ ಡಿ ಯ ಮುಖ್ಯ ಮೂಲವೆಂದರೆ ಸೂರ್ಯನ ಬೆಳಕು. ಆದಾಗ್ಯೂ, ಕೊಬ್ಬಿನ ಮೀನು, ಬಲವರ್ಧಿತ ಡೈರಿ ಉತ್ಪನ್ನಗಳು ಮತ್ತು ಮೊಟ್ಟೆಯ ಹಳದಿಗಳಂತಹ ಆಹಾರಗಳಿಂದಲೂ ಇದನ್ನು ಪಡೆಯಬಹುದು.**
- **ವಾರದಲ್ಲಿ ಕೆಲವು ಬಾರಿ ಕನಿಷ್ಠ 15-30 ನಿಮಿಷಗಳ ಕಾಲ ಸೂರ್ಯನಿಗೆ ಒಡ್ಡಿಕೊಳ್ಳುವ ಗುರಿಯನ್ನು ಹೊಂದಿರುವ ಸೂರ್ಯನಲ್ಲಿ ಹೆಚ್ಚಿನ ಸಮಯವನ್ನು ಹೊರಾಂಗಣದಲ್ಲಿ ಕಳೆಯಿರಿ. ಸೂರ್ಯನ ಮಾನ್ಯತೆ ಸೀಮಿತವಾಗಿದ್ದರೆ, ನಿಮ್ಮ ವೈದ್ಯರು ಅಥವಾ ಪೌಷ್ಟಿಕತಜ್ಞರು ಶಿಫಾರಸು ಮಾಡಿದಂತೆ ವಿಟಮಿನ್ ಡಿ ಪೂರಕಗಳನ್ನು ತೆಗೆದುಕೊಳ್ಳುವುದನ್ನು ಪರಿಗಣಿಸಿ.**







### ಕಬ್ಬಿಣದ ಕೊರತೆ

ರಕ್ತದಲ್ಲಿ ಆಮ್ಲಜನಕವನ್ನು ಸಾಗಿಸಲು ಮತ್ತು ಶಕ್ತಿಯ ಮಟ್ಟವನ್ನು ಕಾಪಾಡಿಕೊಳ್ಳಲು ಕಬ್ಬಿಣವು ನಿರ್ಣಾಯಕವಾಗಿದೆ. ಕಬ್ಬಿಣದ ಕೊರತೆಯ ರಕ್ತಹೀನತೆ ಸಾಮಾನ್ಯ ಸ್ಥಿತಿಯಾಗಿದ್ದು ಅದು ಆಯಾಸ, ದೌರ್ಬಲ್ಯ ಮತ್ತು ತೆಳು ಚರ್ಮಕ್ಕೆ ಕಾರಣವಾಗಬಹುದು. ಕಬ್ಬಿಣದ ಉತ್ತಮ ಆಹಾರ ಮೂಲಗಳು ನೇರ ಮಾಂಸ, ಕೋಳಿ, ಮೀನು, ಬೀನ್ಸ್, ಮಸೂರ ಮತ್ತು ಬಲವರ್ಧಿತ ಧಾನ್ಯಗಳನ್ನು ಒಳಗೊಂಡಿವೆ.

### ವಿಟಮಿನ್ ಬಿ 12 ಕೊರತೆ

ವಿಟಮಿನ್ ಬಿ 12 ಸರಿಯಾದ ನರಗಳ ಕಾರ್ಯ, ಕೆಂಪು ರಕ್ತ ಕಣಗಳ ಉತ್ಪಾದನೆ ಮತ್ತು ಡಿಎ[illegible] ಸಂಶ್ಲೇಷಣೆಗೆ ಮುಖ್ಯವಾಗಿದೆ. ಈ ಪ್ರಮುಖ ವಿಟಮಿನ್ ಕೊರತೆಯು ರಕ್ತಹೀನತೆ, ನರವೈಜ್ಞಾನಿಕ ಸಮಸ್ಯೆಗಳು ಮತ್ತು ಆಯಾಸಕ್ಕೆ ಕಾರಣವಾಗಬಹುದು. ಮಾಂಸ, ಡೈರಿ ಮತ್ತು ಮೊಟ್ಟೆಗಳಂತಹ ಪ್ರಾಣಿ ಉತ್ಪನ್ನಗಳು ವಿಟಮಿನ್ ಬಿ 12 ನ ಪ್ರಾಥಮಿಕ ಮೂಲಗಳಾಗಿವೆ. ನೀವು ಸಸ್ಯಾಹಾರಿ ಅಥವಾ ಸಸ್ಯಾಹಾರಿ ಆಹಾರವನ್ನು ಅನುಸರಿಸಿದರೆ, ನಿಮ್ಮ ಅವಶ್ಯಕತೆಗಳನ್ನು ಪೂರೈಸಲು ಬಲವರ್ಧಿತ ಆಹಾರಗಳು ಅಥವಾ ಃ12 ಪೂರಕಗಳನ್ನು ಪರಿಗಣಿಸಿ.

### ಕ್ಯಾಲ್ಸಿಯಂ ಕೊರತೆ

ಕ್ಯಾಲ್ಸಿಯಂ ಬಲವಾದ ಮೂಳೆಗಳು ಮತ್ತು ಹಲ್ಲುಗಳಿಗೆ ಮಾತ್ರವಲ್ಲ, ರಕ್ತ ಹೆಪ್ಪುಗಟ್ಟುವಿಕೆ ಮತ್ತು ಸ್ನಾಯುವಿನ ಕಾರ್ಯನಿರ್ವಹಣೆಗೆ ಮುಖ್ಯವಾಗಿದೆ. ಕ್ಯಾಲ್ಸಿಯಂ ಕೊರತೆಯು ಆಸ್ಟಿಯೊಪೊರೋಸಿಸ್ ಮತ್ತು ಸುಲಭವಾಗಿ ಮೂಳೆಗಳಿಗೆ ಕಾರಣವಾಗಬಹುದು. ಡೈರಿ ಉತ್ಪನ್ನಗಳು, ಎಲೆಗಳ ಸೊಪ್ಪುಗಳು, ಬಲವರ್ಧಿತ ಸಸ್ಯ ಆಧಾರಿತ ಹಾಲು ಮತ್ತು ಬೀಜಗಳು ಕ್ಯಾಲ್ಸಿಯಂನ ಅತ್ಯುತ್ತಮ ಮೂಲಗಳಾಗಿವೆ. ನೀವು ಕ್ಯಾಲ್ಸಿಯಂ ಕೊರತೆಯನ್ನು ಹೊಂದಿದ್ದರೆ, ವಿಶೇಷವಾಗಿ ಲ್ಯಾಕ್ಟೋಸ್ ಅಸಹಿಷ್ಣುತೆ ಅಥವಾ ಡೈರಿ ಅಲರ್ಜಿ ಹೊಂದಿರುವ ವ್ಯಕ್ತಿಗಳಿಗೆ ಪೂರಕಗಳ ಅಗತ್ಯವಿದ್ದರೆ ನಿಮ್ಮ ವೈದ್ಯರನ್ನು ಕೇಳಿ.

## ಪ್ರಮುಖ ಸುದ್ದಿ

# ಸೆ.16 ರಂದು ಹೊಸದುರ್ಗದಲ್ಲಿ ಹಂಸಲೇಖಗೆ ಅಭಿನಂದನಾ ಸಮಾರಂಭ: ಗೋ.ತಿಪ್ಪೇಶ್

» ಹೊಸದುರ್ಗ

ನಾದಬ್ರಹ್ಮ ಹಂಸಲೇಖ ಅವರು ದಸರಾ ಉದ್ಘಾಟನೆಗೆ ಆಯ್ಕೆಯಾಗಿರುವುದು ಸಂಗೀತ ಲೋಕಕ್ಕೆ ಸಂದ ಗೌರವ. ಹೀಗಾಗಿ ಅವರಿಗೆ ಸೆ. 16 ರಂದು ಹೊಸದುರ್ಗ ನಾಗರೀಕ ವೇದಿಕೆ ವತಿಯಿಂದ ಅಭಿನಂದನಾ ಸಮಾರಂಭ ನಡೆಯಲಿದೆ ಎಂದು ನಾಗರೀಕ ವೇದಿಕೆ ಅಧ್ಯಕ್ಷ ಗೋ. ತಿಪ್ಪೇಶ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಅಭಿನಂದನಾ ಸಮಾರಂಭ ಶನಿವಾರ ಸಂಜೆ 5 ಗಂಟೆಗೆ ಪಟ್ಟಣದ ವಿರಾಟ್ ಹಿಂದೂ ಮಹಾಸಾಗರ ಗಣಪತಿ ವೇದಿಕೆಯ ಅಯೋಧ್ಯೆ ಮಂಟಪದಲ್ಲಿ ನಡೆಯಲಿದೆ. ಸಾಣೇಹಳ್ಳಿ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ,



ಕನಕ ಗುರುಪೀಠದ ಈಶ್ವರಾನಂದಪುರಿ ಸ್ವಾಮೀಜಿ, ಕುಂಚಿಟಿಗ ಮಠದ ಶಾಂತವೀರ ಸ್ವಾಮೀಜಿ, ಮಾರುತಿ ಪೀಠದ ಮಾರುತಿ ವಿಜಯ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಶಾಸಕ ಬಿ ಜಿ ಗೋವಿಂದಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಸಾಹಿತಿ ಪ್ರೊ.ಎಸ್.ಜಿ. ಸಿದ್ದರಾಮಯ್ಯ, ಚಂದ್ರಶೇಖರ್ ತಾಳ್ಯ, ಮಂಜಪ್ಪ ಮಾಗೋದಿ ಭಾಗವಹಿಸುವರು.

ಗಾಯನ ರಸಸಂಜೆ ಕಾರ್ಯಕ್ರಮಕ್ಕೆ ಪ್ರಖ್ಯಾತ ಗಾಯಕರು ಸಹ ಗಾಯನ ಮಾಡುವರು. ಜೊತೆಗೆ ಸ್ಥಳೀಯ ಕಲಾವಿದರಿಗೂ ಅವಕಾಶ ಕಲ್ಪಿಸಲಾಗುವುದು. ಆಡುವ ಮಾತನ್ನು ಹಾಡನ್ನಾಗಿಸಿ, ಕನ್ನಡ ಸಿನಿಮಾ ಜಗತ್ತಿಗೆ ವಿಶೇಷ ಕೊಡುಗೆ ನೀಡಿ, ಚರಿತ್ರಾರ್ಹ ಕಾರ್ಯ ಮಾಡಿ, ಕಲಾರಸಿಕರ ಆರಾಧ್ಯ ದೈವವಾಗಿರುವ ಹಂಸಲೇಖ ಅವರನ್ನು ದಸರಾ ಉದ್ಘಾಟನೆಗೆ ಆಯ್ಕೆ ಮಾಡಿರುವುದು ಸಂತಸ ತಂದಿದೆ.

ಕಾರ್ಯಕ್ರಮಕ್ಕೂ ಮುನ್ನ ಹಂಸಲೇಖ ಅವರು ಪಟ್ಟಣದ ವೃದ್ಧಾಶ್ರಮಕ್ಕೆ ಭೇಟಿ ನೀಡಿ, ಅಲ್ಲಿನ ವೃದ್ಧರಿಗೆ ಬಟ್ಟೆ ವಿತರಿಸುವರು.

### ಸೆ.17ಕ್ಕೆ ವಿಶ್ವಕರ್ಮ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ವಿಶ್ವಕರ್ಮ ಜಯಂತಿ ಆಚರಣೆ ಸಮಾರಂಭವನ್ನು ಇದೇ ಸೆಪ್ಟೆಂಬರ್ 17ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದತ.ರಾ.ಸುರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಸಿಂದಗಿ ಆಲಮೇಲ ಶ್ರೀವಿಶ್ವಬ್ರಾಹ್ಮಣ ಮೂರುಝಾವದಮಠ ಹಾಗೂ ಕರ್ನಾಟಕ ರಾಜ್ಯ ವಿಶ್ವಬ್ರಾಹ್ಮಣ ಮಠಾಧಿಪತಿಗಳ ಮತ್ತು ಪೀಠಾಧಿಪತಿಗಳ ಅಭಿವೃದ್ಧಿ ಸಂಘದ ಅಧ್ಯಕ್ಷ ಶ್ರೀ ರಾಮಚಂದ್ರಸ್ವಾಮಿಗಳು ದಿವ್ಯ ಸಾನಿಧ್ಯವಹಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಯಣಸ್ವಾಮಿ ಘನ ಉಪಸ್ಥಿತಿ ವಹಿಸುವವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಉದ್ಘಾಟಿಸುವರು. ಚಿತ್ರದುರ್ಗ ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅವರು ಅಧ್ಯಕ್ಷತೆ ವಹಿಸುವವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ. ಗೋವಿಂದಪ್ಪ, ಟಿ. ರಘುಮೂರ್ತಿ, ಡಾ.ಎಂ. ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಕೆ.ಟಿ.ಸುರೇಶಾಚಾರ್, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಎ. ಶಂಕರಾಚಾರ್, ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು ಜಿಲ್ಲೆಯ ವಿಶ್ವಕರ್ಮ ಸಮಾಜದ ಸಮಸ್ತ ಗೌರವಾನ್ವಿತ ಮುಖಂಡರು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ. ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ವಿಜೇತರು, ಸುರಭೀ ಹೊಯ್ಸಳ ಕಲಾನಿಕೇತನ ಕಾರ್ಯದರ್ಶಿಗಳು ಹಾಗೂ ಹೊಯ್ಸಳ ಶಿಲ್ಪಕಲಾ ಕುಟೀರ ಅಧ್ಯಕ್ಷ ಶಿಲ್ಪಿ ಎಸ್. ಮಂಜುನಾಥಚಾರ್ಯ ಉಪನ್ಯಾಸ ನೀಡುವವರು. ಚಿತ್ರದುರ್ಗ ಉಮೇಶ ಪತ್ತಾರ ಮತ್ತು ತಂಡದವರಿಂದ ಗೀತಗಾಯನ ನಡೆಯಲಿದೆ. ಅಂದು ಬೆಳಿಗ್ಗೆ 9.30ಕ್ಕೆ ಕೋಟೆ ಆಂಜನೇಯ ದೇವಸ್ಥಾನದಿಂದ (ಬುರಜನಹಟ್ಟಿ ಸರ್ಕಲ್) ತ.ರಾ.ಸು ರಂಗಮಂದಿರದವರೆಗೆ ಮೆರವಣಿಗೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 11 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. 2023-24ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಸಲ್ಲಿಸಬಹುದು. ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ.1 ಲಕ್ಷ ಒಳಗಿರಬೇಕು. ವಿದ್ಯಾರ್ಥಿಗಳು https://shp.karnataka.gov.in ವೆಬ್‌ಸೈಟ್‌ನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದು, ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ https://bcwd.karnataka.gov.in/ ವೆಬ್‌ಸೈಟ್‌ಯನ್ನು ಸಂಪರ್ಕಿಸಬಹುದು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels@karnataka.gov.in ವೆಬ್‌ಸೈಟ್‌ಗೆ ಇ-ಮೇಲ್ ಮುಖಾಂತರ ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T